ಸಂಪುಟ : 10 ಸಂಚಿಕೆ: 89 ಪುಟ : 4+2 ಬೆಲೆ: 3.00 ಗುರುವಾರ ಮೇ 08 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 89 Pages : 4+2 Price : 3.00 Thursday May 08 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ 8ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.


**ಸ್ಥಳಗಳ ವಿವರ:** ವಾರ್ಡ್ ನಂ. 22-ಅಮರೇಶ್ವರ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 5 - ನರಸಾಪೂರ ಆಶ್ರಯ ಕಾಲೋನಿ ಪೂರ್ತಿ ಭಾಗಗಳು. ವಾರ್ಡ್ ನಂ. 28 - ಪಂಚಾಕ್ಷರಿ ನಗರ 5, 6ನೇ ಕ್ರಾಸ್‌ಗಳು. ವಾರ್ಡ್ ನಂ. 33 - ಜಾಕೀರ ಹುಸೇನ್ ಕಾಲೋನಿ, ಗಡ್ಡಿ ಪಂಪ ಹಿಂದಿನ ಭಾಗ ಹಾಗೂ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 7 - ಮಿಸ್ಕಿನ ಪ್ಲಾಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 - ಪಿ ಪಿ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 11 - ನಿಸರ್ಗ ಬಡಾವಣೆ, ಶಿವಬಸವ ನಗರ, ಹನುಮಂತ ದೇವರ ಗುಡಿ, ರಿಂಗ್ ರೋಡ್, ಗಾಣಿಗೇರ ಭವನ ಉಳಿದ ಕೆಲವು ಭಾಗಗಳು.

ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್.ಎಸ್.ಎಲ್.ಸಿ ಪರೀಕ್ಷೆ ಶುಲ್ಕ ಪಾವತಿಯಿಂದ ವಿನಾಯಿತಿ

■ವಿಜಯಸಾಕ್ಷಿ ಸುದ್ದಿ, ಗದಗ



2025ರ ಎಸ್.ಎಸ್.ಎಲ್.ಸಿ ಪರೀಕ್ಷೆ-1ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪರೀಕ್ಷೆ-2ನ್ನು ಮೇ 26ರಿಂದ ಜೂನ್ 02ರವರೆಗೆ ನಡೆಸಲಾಗುತ್ತದೆ. ಪ್ರಪ್ರಥಮ ಬಾರಿಗೆ ಪರೀಕ್ಷೆಗೆ ನೋಂದಣಿಯಾಗುವ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ.

ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಮೇ 10 ಕೊನೆಯ ದಿನವಾಗಿದ್ದು, ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಗದಗ ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡು ಪರೀಕ್ಷೆ-2 ಬರೆಯುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

### 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಕುರಿತು ಸಚಿವ ಎಚ್.ಕೆ. ಪಾಟೀಲ ಪ್ರತಿಕ್ರಿಯೆ

# ಭಾರತವನ್ನು ಕೆಣಕಿದರೆ ತಕ್ಕ ಶಾಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಪಹಲ್ಗಾಮ್‌ನಲ್ಲಿ ಉಗ್ರಗಾಮಿಗಳು ಪಾಕಿಸ್ತಾನದ ಕುತಂತ್ರದಿಂದ ಭಾರತೀಯ ಪ್ರವಾಸಿಗರ ಮೇಲೆ ದಾಳಿ ನಡೆಸಿ ಹತ್ಯೆಗೈದರು. ಅದಕ್ಕೆ ತಕ್ಕ ಶಾಸ್ತಿಯಾಗಿ ಭಾರತದ ಸೈನ್ಯ ಉಗ್ರಗಾಮಿಗಳ ತಾಣಗಳನ್ನು ಧ್ವಂಸ ಮಾಡಿದೆ. ಭಾರತವನ್ನ ಕೆಣಕಿದರೆ ತಕ್ಕ ಶಾಸ್ತಿ ಆಗುತ್ತದೆ ಎನ್ನುವ ವಿಚಾರ ಶತ್ರುಗಳಿಗೂ ಈಗಾಗಲೇ ಅರ್ಥವಾಗಿದೆ. ಭಾರತೀಯ ಸೈನ್ಯದ ದಾಳಿ ಸಮಾಧಾನ ತಂದಿದೆ ಎಂದು ಕಾನೂನು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಪ್ರತಿಕ್ರಿಯಿಸಿದರು.

ಭಾರತ ಸೈನಿಕರ ಆಪರೇಷನ್ ಸಿಂಧೂರ ವಿಚಾರಕ್ಕೆ ಸಂಬಂಧಿಸಿ ಗದುಗಿನಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಸಚಿವರು ಮಾತನಾಡಿದರು.

ಸುಮಾರು ಒಂಬತ್ತು ಕಡೆಗಳಲ್ಲಿ ಕಾರ್ಯಾಚರಣೆ ನಡೆದಿದ್ದು, ಸೂಕ್ತ ಪ್ರತಿಫಲ ಸಿಕ್ಕಿದೆ. ದೇಶದ ಜನ ನಿರ್ಣಯ ಮಾಡಿ, ಒಗ್ಗಟ್ಟಿನ ಬಲವನ್ನು ಸೈನ್ಯಕ್ಕೆ ನೀಡಿದ್ದೇವೆ. ಈ ಬಗ್ಗೆ ಹೆಮ್ಮೆ ಮೂಡುವಂತೆ ಕಾರ್ಯಾಚರಣೆ ನಡೆದಿದ್ದು, ಇದು ಯುದ್ಧ ಕಾಲ, ಎಲ್ಲರೂ ಸನ್ನದ್ಧರಾಗಿ ಇರಬೇಕು. ಈ ಹಿನ್ನೆಲೆಯಲ್ಲಿ ಗುರುವಾರ ಬೆಳಿಗ್ಗೆ 10.30ಕ್ಕೆ ಗದಗ ಜಿಲ್ಲಾಡಳಿತದಿಂದ ಸಭೆ ಆಯೋಜಿಸಲಾಗಿದ್ದು, ಈ ಕುರಿತು ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮಾಜಿ ಸೈನಿಕರೊಂದಿಗೂ ಮಾತನಾಡಿದ್ದೇನೆ. ಮಾಜಿ ಸೈನಿಕರು, ಎನ್‌ಸಿಸಿ, ಸ್ಕೌಟ್ಸ್, ಪೊಲೀಸ್ ಅಂಗ ಸಂಸ್ಥೆಗಳೊಂದಿಗೆ ಸಭೆ ನಡೆಸಿ, ಸಾರ್ವಜನಿಕರನ್ನು ಜಾಗೃತಗೊಳಿಸಲು ಯಾವ ರೀತಿ ಕ್ರಮ ಕೈಗೊಳ್ಳಬೇಕು ಎನ್ನುವುದರ ಕುರಿತು ಸಮಾಲೋಚನೆ ನಡೆಸಲಿದ್ದೇವೆ ಎಂದರು.

ಪಾಕಿಸ್ತಾನ ಪ್ರೇರಿತ ಉಗ್ರರಿಗೆ ಪಾಠ ಕಲಿಸುವ ಕೆಲಸವನ್ನು ಭಾರತೀಯ ಸೇನೆ ಆರಂಭಿಸಿದ್ದು, ಮೊದಲ ದಾಳಿಯಲ್ಲೇ ಉಗ್ರರ ಹಲವಾರು ನೆಲೆಗಳು ಧ್ವಂಸಗೊಂಡಿವೆ. ಈ ಹಿನ್ನೆಲೆಯಲ್ಲಿ ಗದುಗಿನಲ್ಲಿ ಮಾಜಿ ಸೈನಿಕರು ಸೇನಾ ಕಾರ್ಯಾಚರಣೆಯನ್ನು ಸಿಹಿ ಹಂಚುವ ಮೂಲಕ ಸಂಭ್ರಮಿಸಿದರು. ಈ ವೇಳೆ ಮಾತನಾಡಿದ ಮಾಜಿ ಸೈನಿಕರು, ಉಗ್ರರ ನೆಲೆಗಳನ್ನು ನೆಲಸಮ ಮಾಡುವ ಕೆಲಸ ಭಾರತದ ಸೇನೆ ಶುರುಮಾಡಿದ್ದು ಖುಷಿಯಾಗುತ್ತಿದೆ. ಪಾಕಿಸ್ತಾನದ ನೀಚ ಕೃತ್ಯಗಳಿಗೆ ಕಡಿವಾಣ ಹಾಕಲೇಬೇಕಿತ್ತು, ಭಾರತದ ಬಲಿಷ್ಠ ಸೇನೆಯನ್ನು ಎದುರು ಹಾಕಿಕೊಳ್ಳುವ ಕೆಲಸ ಅದು ಮಾಡಿದೆ. ಹೇಡಿಗಳಿಗೆ ತಕ್ಕ ಶಾಸ್ತಿಯಾಗಲಿದೆ ಎಂದರು.

ಭಾರತೀಯ ಸೇನೆಯಿಂದ ಆಪರೇಷನ್ ಸಿಂಧೂರ್ ಯಶಸ್ವಿಯಾದ ಹಿನ್ನೆಲೆಯಲ್ಲಿ ಜಯ ಕರ್ನಾಟಕ ಸಂಘಟನೆ ಸೇರಿದಂತೆ ಸಾರ್ವಜನಿಕರು ಗದುಗಿನ ಪಂಡಿತ ಪುಟ್ಟರಾಜ ಗವಾಯಿಗಳ ಮಠದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಸೈನಿಕರಿಗೆ ದೈವ ಬಲ ತುಂಬುವ ಉದ್ದೇಶದಿಂದ ಪೂಜೆ ಸಲ್ಲಿಸಿದ್ದೇವೆ. ಭಾರತೀಯ ಸೈನ್ಯ ಪಹಲ್ಗಾಮ್ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ. ನಮ್ಮ ಸೈನಿಕರು ಪಾಕಿಸ್ತಾನಕ್ಕೆ ನುಗ್ಗಿ ಭಯೋತ್ಪಾದಕರನ್ನು ಹತ್ಯೆ ಮಾಡಿದ್ದಾರೆ. ಮುಂದಿನ ಕಾರ್ಯಾಚರಣೆಯಲ್ಲಿಯೂ ನಮ್ಮ ಸೇನೆ ವಿಜಯಶಾಲಿಯಾಗಬೇಕು ಎಂದು ಪ್ರಾರ್ಥನೆ ಸಲ್ಲಿಸಿದ್ದೇವೆ ಎಂದು ಸಂಘಟನೆಯ ಪದಾಧಿಕಾರಿಗಳು ತಿಳಿಸಿದರು.



### ಅಡರಕಟ್ಟಿಯ ಸಹಕಾರಿ ಸಂಘದ ಅಮೃತ ಮಹೋತ್ಸವ ಸಮಾರಂಭ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಸಂಘ ಬೆಳೆಯಲು ಸಮುದಾಯಯದ ಪಾತ್ರ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಹಲ್ಗಾಮ್‌ನಲ್ಲಿ ಕನ್ನಡಿಗರು ಸೇರಿ 26 ಜನ ಭಾರತೀಯರ ಮೇಲಿನ ಉಗ್ರರ ದಾಳಿಗೆ ಪ್ರತಿಯಾಗಿ ರಾತ್ರೋರಾತ್ರಿ ಉಗ್ರರ ಅಡಗುದಾಣಗಳ ಮೇಲೆ ಮಾಕ್‌ಡ್ರಿಲ್ ದಾಳಿ ಮಾಡಲು ರಕ್ಷಣಾ ವ್ಯವಸ್ಥೆಗೆ ಮುಕ್ತ ಸ್ವಾತಂತ್ರ್ಯ ನೀಡಿರುವ ಪ್ರಧಾನಮಂತ್ರಿಗಳ ಕ್ರಮ ಸ್ವಾಗತಾರ್ಹ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ ಹೇಳಿದರು.

ಅವರು ಬುಧವಾರ ತಾಲೂಕಿನ ಅಡರಕಟ್ಟಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಮೃತ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ದೇಶದ ನಂದನವನ ಕಾಶ್ಮೀರಕ್ಕೆ ಪ್ರವಾಸಕ್ಕೆ ಹೋದ ಸಂದರ್ಭದಲ್ಲಿ ಏನೂ ತಪ್ಪು ಮಾಡದ ನಮ್ಮವರನ್ನು ಪಾಕಿಸ್ತಾನದ ಉಗ್ರಗಾಮಿ ಅಮಾನವೀಯ ರೀತಿಯಲ್ಲಿ ಹತ್ಯೆ ಮಾಡಿ ಭಾರತೀಯರಲ್ಲಿ ಭಯ ಹುಟ್ಟಿಸಬೇಕೆಂಬ ಹುನ್ನಾರ ಮಾಡಿದ್ದಾರೆ. ಇದು ಶಾಂತಿ ಪ್ರಿಯರಾದ ಭಾರತೀಯರೆಲ್ಲರ ಸ್ವಾಭಿಮಾನ ಕೆರಳಿಸಿದೆ.



ಭಾರತೀಯ ಸೇನೆ ಅತ್ಯಂತ ಬಲಾಢ್ಯವಾಗಿದ್ದು, ಇದಕ್ಕೆ ಉತ್ತರ ಕೊಡಲೇಬೇಕಾದ ಸಂದರ್ಭದಲ್ಲಿ ಪ್ರಧಾನಮಂತ್ರಿಗಳು ಸೇನಾಪಡೆಗೆ ಮುಕ್ತ ಸ್ವಾತಂತ್ರ್ಯ ನೀಡಿದ್ದಾರೆ.

ದೇಶದ 140 ಕೋಟಿ ಭಾರತೀಯರು ಇನ್ನು ಮುಂದೆ ಪಾಕಿಸ್ತಾನದ ಉಗ್ರಗಾಮಿಗಳಿಗೆ ತಕ್ಕ ಶಾಸ್ತಿ ನೀಡಲು ಬದ್ಧರಾಗಿದ್ದೇವೆ ಎಂದರು.

ಅಡರಕಟ್ಟಿ ಪಿಕೆಪಿಎಸ್ ಸಂಘದ ಸಾಧನೆ ಶ್ಲಾಘನೀಯವಾಗಿದೆ. ಭಾರತೀಯ ಸಹಕಾರ ರಂಗದಲ್ಲಿ ಸಾಧನೆಯ ಮೈಲುಗಲ್ಲು ಮುಟ್ಟಿದ ಕೀರ್ತಿ ನಮ್ಮ ಜಿಲ್ಲೆಯದ್ದಾಗಿದೆ. ಒಬ್ಬರು ಎಲ್ಲರಿಗಾಗಿ-ಎಲ್ಲರೂ ಒಬ್ಬರಿಗಾಗಿ ಎಂಬ ಮಹಾನ್ ತತ್ವದಡಿ ಸಹಕಾರಿ ಕ್ಷೇತ್ರವನ್ನು ಬೆಳೆಸುವ ಜವಾಬ್ದಾರಿ ಸಹಕಾರಿಗಳದ್ದಾಗಿದೆ.

ಸಹಕಾರಿ ಕ್ಷೇತ್ರದಲ್ಲಿ ನಿಸ್ವಾರ್ಥ ಹಾಗೂ ಪ್ರಾಮಾಣಿಕ ಸೇವೆ ಸಲ್ಲಿಸಿದಾಗ ಮಾತ್ರ ಅದು ಬೆಳೆಯಲು ಸಾಧ್ಯವಾಗುತ್ತದೆ. ಸಹಕಾರಿ ಕ್ಷೇತ್ರ ಬೆಳೆಯಲು ಸಮುದಾಯಯದ ಪಾತ್ರ ಮುಖ್ಯವಾಗಿದೆ.

ಆ ನಿಟ್ಟಿನಲ್ಲಿ ಅಡರಕಟ್ಟಿ ಗ್ರಾಮದ ಸಹಕಾರಿ ಸಂಘ ಗ್ರಾಮೀಣರ ಆಶಾಕಿರಣ/ಆಧಾರ ಸ್ತಂಬವಾಗಿ ಅಮೃತ ಮಹೋತ್ಸವ ಸಂಭ್ರಮದಲ್ಲಿರುವುದು ಶ್ಲಾಘನೀಯ ಎಂದರು.

ಮುಕ್ತಿಮಂದಿರ ಧರ್ಮಕ್ಷೇತ್ರ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಗಂಜಿಗಟ್ಟಿಯ ಡಾ. ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯರು, ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯರು, ಸಂಕದಾಳದ ಹಾಲಸ್ವಾಮಿಗಳು ಉಪಸ್ಥಿತರಿದ್ದರು. ಸಂಘದ ಅಧ್ಯಕ್ಷ ಮಹಾಂತೇಶ ಬಸಪ್ಪ ಹವಳದ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಮಾಜಿ ಸಹಕಾರಿ ಸಚಿವ ಎಸ್.ಎಸ್. ಪಾಟೀಲ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಚನ್ನಪ್ಪ ಜಗಲಿ, ಎಸ್.ಪಿ. ಬಳಿಗಾರ, ಜಿ.ವಿ. ಪಾಟೀಲ ಸೇರಿ ಕೆಸಿಸಿ ಬ್ಯಾಂಕಿನ ನಿರ್ದೇಶಕರು, ಪಿಕೆಪಿಎಸ್ ಸಂಘದ ಆಡಳಿತ ಮಂಡಳಿ, ಕೃಷಿ ಇಲಾಖೆ, ಸಹಕಾರಿ ಸಂಘದ ಅಧಿಕಾರಿಗಳು ಸೇರಿ ಗ್ರಾಮದ ಹಿರಿಯರು, ಮಹಿಳೆಯರು, ಯುವಕರು ಪಾಲ್ಗೊಂಡಿದ್ದರು.

ಚನ್ನಪ್ಪ ಹಳಮನಿ, ವಿ.ಎಂ ಶಿಗ್ಲಿ, ನಿಂಗನಗೌಡ ಪಾಟೀಲ ಸೇರಿ ಪಿಕೆಪಿಎಸ್‌ನ ನಿರ್ದೇಕರು, ಸಿಬ್ಬಂದಿ ನಿರ್ವಹಿಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ರಂಭಾಪುರಿ ಜಗದ್ಗುರು ವೀರಸೋಮೇಶ್ವರ ಶಿವಾಚಾರ್ಯರು ಆಶೀರ್ವಚನ ನೀಡಿ, ಗ್ರಾಮದ ಹಿರಿಯ ಶ್ರಮ, ಸಾಧನೆಯಿಂದ ಸಂಘ 75 ವರ್ಷಗಳ ಸುದೀರ್ಘ ಸೇವೆ ಮಾಡಲು ಸಾಧ್ಯವಾಗಿದೆ. ಭಾರತ ಕೃಷಿ ಪ್ರಧಾನ ದೇಶವಾಗಿದ್ದು, ಕೃಷಿಯನ್ನೇ ಬದುಕಾಗಿಸಿಕೊಂಡಿರುವ ಗ್ರಾಮೀಣ ಭಾಗದ ರೈತರನ್ನು ಕೃಷಿ ಜತೆಗೆ ಕೃಷಿ ಸಂಬಂಧಿತ ವೃತ್ತಿಗಳಲ್ಲಿ ತೊಡಗಿಸಿ ಅವರ ಆರ್ಥಿಕ ಸ್ಥಿತಿ, ಬದುಕಿನ ಗುಣಮಟ್ಟ ಹೆಚ್ಚಿಸುವಲ್ಲಿ ಸಹಕಾರಿ ಕ್ಷೇತ್ರದ ಪಾತ್ರ ಮಹತ್ವದ್ದಾಗಿದೆ. ಸಕಲ ಜೀವರಾಶಿಗಳಿಗೆ ಅನ್ನ ನೀಡುವ ಅನ್ನದಾತನ ಬದುಕು ಹಸನಾಗಬೇಕು. ಅದಕ್ಕಾಗಿ ಸರ್ಕಾರ ರೈತರ ಹಿತ ಕಾಯುವ ಕೆಲಸ ಮಾಡಬೇಕು ಎಂದರು.

# ವಿಜೃಂಭಣೆಯ ಶ್ರೀ ಸೋಮೇಶ್ವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಆರಾಧ್ಯ ದೈವ ಪುಲಿಗೆರೆಯ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ನಿಮಿತ್ತ ಬುಧವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಶ್ರೀ ಸೋಮೇಶ್ವರ ಮಹಾರಥೋತ್ಸವ ಅತ್ಯಂತ ವಿಜೃಂಭಣೆಯಿಂದ ನೆರವೇರಿತು.

ಜಾತ್ರಾ ಮಹೋತ್ಸವ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅಲಂಕಾರ ಮಾಡಲಾಗಿತ್ತು. ಬೆಳಗಿನಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ಧರಿಸಿ ದೇವಸ್ಥಾನಕ್ಕೆ ಆಗಮಿಸಿ ಸಾಕ್ಷಾತ್ ನಂದಿಯ ಮೇಲೆ ಕುಳಿತ ಶ್ರೀ ಸೋಮೇಶ್ವರನಿಗೆ ಶ್ರದ್ಧಾ-ಭಕ್ತಿಯಿಂದ ನಮಿಸಿದರು. ಹಣ್ಣು-ಕಾಯಿ ನೈವೇದ್ಯ ಮಾಡಿಸಿಕೊಂಡು ಬಳಿಕ ರಥಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನಿರಿಸಿ ಪೂಜಿಸಿದರು.

ಅಪಾರ ಭಕ್ತ ಸಮೂಹದೊಂದಿಗೆ ಜರುಗಿದ ಶ್ರೀ ಸೋಮೇಶ್ವರನ ಮಹಾರಥೋತ್ಸವಕ್ಕೆ ನಾಡಿನಾದ್ಯಂತ ಆಗಮಿಸಿದ್ದ ಭಕ್ತಗಣ ಸಾಕ್ಷಿಯಾಗಿತ್ತು. ಯುವಕರು ತೇರಿನ ಕಳಸಕ್ಕೆ ಗುರಿಯಿಟ್ಟು ಹಣ್ಣು, ಉತ್ತತ್ತಿ ಎಸೆಯುತ್ತಿದ್ದ ದೃಶ್ಯ ಕಂಡು ಬಂದಿತು. ನವ ದಂಪತಿಗಳು ತೇರಿನ ಕಳಸ ನೋಡಲು ಜಮಾಯಿಸಿದ್ದರು.



ಜಾತ್ರಾ ಮಹೋತ್ಸವ ಮಹಾರಥೋತ್ಸವದ ಸಂದರ್ಭದಲ್ಲಿ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಕಮಿಟಿ, ಸೇವಾ ಸಮಿತಿಯ ಸರ್ವ ಸದಸ್ಯರು, ಮುಖ್ಯ ಅರ್ಚಕರು, ಹಿರಿಯರು ನೇತೃತ್ವ ವಹಿಸಿ ನಿರ್ವಹಿಸಿದರು. ಪೊಲೀಸರು ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು.

ಹಿನ್ನೆಲೆಯಲ್ಲಿ ಮಂಗಳವಾರ ಸಂಜೆಯೇ ಸಂಪ್ರದಾಯದಂತೆ ಲಕ್ಷ್ಮೀದೇವಿ ಪೂಜೆ, ರಥಪೂಜೆ ಮತ್ತು ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನೆರವೇರಿತು. ಗುರುವಾರ ಸಂಜೆ 5.30ಕ್ಕೆ ಕಡುಬಿನ ಕಾಳಗ, ಶುಕ್ರವಾರ ಸಂಜೆ ಓಕುಳಿ ಕಾರ್ಯಕ್ರಮದೊಂದಿಗೆ ಜಾತ್ರೆ ಸಂಪನ್ನಗೊಳ್ಳಲಿದೆ.

### ಸೋಮೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿಯಿಂದ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ

# ದ್ವಾರದ ದುರಸ್ತಿ ಕಾರ್ಯ ಶೀಘ್ರ ಪ್ರಾರಂಭಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಸ್ಥಾನವನ್ನು ಇನ್ಫೋಸಿಸ್ ಮುಖ್ಯಸ್ಥೆ ಡಾ. ಸುಧಾಮೂರ್ತಿಯವರು ಜೀರ್ಣೋದ್ಧಾರಗೊಳಿಸಿದ ತರುವಾಯ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರ ಸಂ-ಖ್ಯೆ ಹೆಚ್ಚಾಗುತ್ತಿದೆ. ದೇವಸ್ಥಾನಕ್ಕೆ ಪ್ರವೇಶಿಸುವ ಉತ್ತರ ಭಾಗದ ದ್ವಾರ ಶಿಥಿಲಗೊಂಡಿದ್ದು, ಅದರ ದುರಸ್ತಿ ಕಾರ್ಯವನ್ನು ಶೀಘ್ರ ಪ್ರಾರಂಭಿಸುವಂತೆ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಅವರ ನೇತೃತ್ವದಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲರಿಗೆ ಬುಧವಾರ ಮನವಿ ಸಲ್ಲಿಸಿದರು.

ಪಟ್ಟಣದ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ದೇವಸ್ಥಾನಕ್ಕೆ ಭೇಟಿ ನೀಡಿದ್ದ ಸಚಿವ ಡಾ. ಎಚ್.ಕೆ. ಪಾಟೀಲರನ್ನು ದೇವಸ್ಥಾನದಲ್ಲಿ ಕಮಿಟಿ ವತಿಯಿಂದ ಸ್ವಾಗತಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಪದಾಧಿಕಾರಿಗಳು ಮನವಿ ಅರ್ಪಿಸಿ, ಶ್ರೀ ಸೋಮೇಶ್ವರ ದೇವಸ್ಥಾನದ ಉತ್ತರ ದ್ವಾರದ ಜೀರ್ಣೋದ್ಧಾರಕ್ಕೆ 50 ಲಕ್ಷ ರೂಗಳ ಅನುದಾನ ಒದಗಿಸುವ ವಾಗ್ದಾನ ಮಾಡಿದ್ದೀರಲ್ಲದೆ, ಕ್ರಿಯಾಯೋಜನೆ ಕೂಡಾ ಮಾಡಿಸುತ್ತಿರುವಿರಿ. ತಮ್ಮ ಈ ಸೇವೆಗಾಗಿ ಅಧ್ಯಕ್ಷರು, ಸರ್ವ ಸದಸ್ಯರು ಹಾಗೂ ಊರಿನ ಎಲ್ಲ ಗುರು-ಹಿರಿಯರು, ಸದ್ಭಕ್ತರು ಕೃತಜ್ಞತೆಗಳನ್ನು ತಿಳಿಸುತ್ತೇವೆ ಎಂದರು.

ಈ ಕಾಮಗಾರಿಗೆ ಆದಷ್ಟು ಶೀಘ್ರ ಚಾಲನೆ ನೀಡಿದರೆ ಹೆಚ್ಚು ಅನೂಕೂಲವಾಗುವದು. ಅಲ್ಲದೆ ಶ್ರೀ ಸೋಮೇಶ್ವರ ದೇವಸ್ಥಾನದ ರಥದ 6 ಚಕ್ರಗಳು ಶಿಥಿಲಾವಸ್ಥೆಯಲ್ಲಿದ್ದು, ಹೊಸ ಚಕ್ರ(ಗಾಲಿ)ಗಳ ನವೀಕರಣಕ್ಕೆ ಸುಮಾರು 15 ಲಕ್ಷಗಳ ರೂಪಾಯಿಗಳ ಅನುದಾನದ ಅವಶ್ಯಕತೆಯಿದ್ದು, ವಿಶೇಷ ಅನುದಾನದಲ್ಲಿ ಹೊಸ ಚಕ್ರಗಳ ನಿರ್ಮಾಣಕ್ಕೆ ಅನುಕೂಲ ಕಲ್ಪಿಸಬೇಕೆಂದು ವಿನಂತಿಸಿದರು.

ಈ ▶▶ 3ನೇ ಪುಟಕ್ಕೆ



ಮನವಿಗೆ ಸ್ಪಂದಿಸಿದ ಸಚಿವರು, ಈ ಯೋಜನೆಯಲ್ಲಿ ತಾಂತ್ರಿಕ ತೊಂದರೆಯಿಂದ ವಿಳಂಬವಾಗಿರಬಹುದು. ಅದನ್ನು ಆದಷ್ಟು ಶೀಘ್ರ ವಿಲೇವಾರಿ ಮಾಡಿಸಿ ಕಾಮಗಾರಿಯನ್ನು ಪ್ರಾರಂಭಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುತ್ತೇನೆ ಎಂದರಲ್ಲದೆ, ದೇವಸ್ಥಾನದ ಯಾವುದೇ ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡುವದಾಗಿ ಭರವಸೆ ನೀಡಿದರು.

## ಸಿಂಧೂರ ಕೇವಲ ಸಂಪ್ರದಾಯವಲ್ಲ, ಅದು ಸಂಕೇತ: ನಟ ಮೋಹನ್ ಲಾಲ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ದಾಳಿಗೆ ಪ್ರತಿಕಾರವಾಗಿ ಭಾರತ ಸೇನೆ ದಾಳಿ ನಡೆಸಿದೆ. ತಡರಾತ್ರಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರರ 9 ಅಡುಗುತಾಣಗಳ ಮೇಲೆ ಏರ್‌ಸ್ಟ್ರೈಕ್ ಮಾಡಲಾಗಿದ್ದು, ದಾಳಿಯಲ್ಲಿ 100ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ.

ಇದೀಗ ಭಾರತೀಯ ಸೇನೆಯ ಮಲಯಾಳಂ ಚಿತ್ರರಂಗದ ಖ್ಯಾತ ನಟ ಮೋಹನ್ ಲಾಲ್ ಹೊಗಳಿದ್ದಾರೆ.

ನಾವು ಸಿಂಧೂರವನ್ನು ಕೇವಲ ಸಂಪ್ರದಾಯಿಕವಾಗಿ ಇಡುತ್ತಿಲ್ಲ. ಬದಲಾಗಿ ಸಂಕೇತವಾಗಿ ಇಡುತ್ತೇವೆ. ನಮಗೆ ಸವಾಲು ಹಾಕಿದ್ರೆ ನಾವು ಎಂದಿಗಿಂತಲೂ ಹೆಚ್ಚು ನಿರ್ಭೀತರಾಗಿ ಮತ್ತು ಬಲಶಾಲಿಯಾಗಿ ನಿಲ್ಲುತ್ತೇವೆ. ಭಾರತೀಯ ಸೇನೆ, ನೌಕಾಪಡೆ, ವಾಯುಪಡೆ ಮತ್ತು ಬಿಎಸ್‌ಎಫ್‌ನ ಪ್ರತಿಯೊಬ್ಬ ಧೈರ್ಯಶಾಲಿ ಹೃದಯಗಳಿಗೆ ನಮಿಸುತ್ತೇನೆ. ನಿಮ್ಮ ಧೈರ್ಯ ನಮ್ಮ ಹೆಮ್ಮೆಯನ್ನು ಇಮ್ಮಡಿಗೊಳಿಸುತ್ತದೆ. ಜೈ ಹಿಂದ್.. ಆಪರೇಷನ್ ಸಿಂಧೂರ ಎಂದು ಭಾರತೀಯ ಸೇನೆಗೆ ಮೋಹನ್ ಲಾಲ್ ಮೆಚ್ಚುಗೆ ಸೂಚಿಸಿದ್ದಾರೆ.

ಎ.22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಗೆ 26 ಮಂದಿ ಬಲಿಯಾಗಿದ್ದರು. ಅದಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆ ನಡೆಸುತ್ತಿರುವ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ 100ಕ್ಕೂ ಹೆಚ್ಚು ಉಗ್ರರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

ಕೈಮಗ್ಗ-ಜವಳಿ ತಂತ್ರಜ್ಞಾನದಲ್ಲಿ 3 ವರ್ಷಗಳ ಡಿಪ್ಲೋಮಾ ಕೋರ್ಸ್

# ಡಿ.ಹೆಚ್.ಟಿ.ಟಿ ಕಲಿಕೆಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ ಡಿ.ಹೆಚ್.ಟಿ.ಟಿ ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ



ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ: 01-07-2025ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15ರಿಂದ 23ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15ರಿಂದ 25ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ- ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ, ದೂರವಾಣಿ ಸಂಖ್ಯೆ: 08372-259664 ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ ಉಪಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

ಅರ್ಜಿಗಳನ್ನು ಆನಲೈನ್‌ನಲ್ಲಿ ಡೌನಲೊಡ್ ಮಾಡಿಕೊಳ್ಳಲು ಲಿಂಕ್ https://khtigadag.ac.in/AdmissionForm.pdf ಬಳಸಬಹುದಾಗಿದ್ದು, ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಜೂನ್ 15ರಂದು ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102 ಇಲ್ಲಿಗೆ ಸಲ್ಲಿಸಲು ಸೂಚಿಸಲಾಗಿದೆ ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು ತಿಳಿಸಿದ್ದಾರೆ.

**ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ, ಸಂಸ್ಥೆಗಳ ವಿವರ**

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ ಕರ್ನಾಟಕ-22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ ತಮಿಳುನಾಡು-12 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ-03 ಅಭ್ಯರ್ಥಿಗಳು, ವೆಂಕಟಗಿರಿ ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು ಕೇರಳ-02 ಅಭ್ಯರ್ಥಿಗಳು ಹೀಗೆ ಒಟ್ಟು 39 ಅಭ್ಯರ್ಥಿಗಳಿಗೆ ಅವಕಾಶವಿದೆ.

## ಪ್ರಯಾಣಿಕರಿಗೆ ಎಚ್ಚರಿಕೆ: 5 ರಾಜ್ಯಗಳಿಗೆ ತೆರಳಬೇಕಿದ್ದ ವಿಮಾನಗಳು ಕ್ಯಾನ್ಸಲ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕಾರವಾಗಿ ಭಾರತೀಯ ಸೇನೆಯು 'ಆಪರೇಷನ್ ಸಿಂಧೂರ್' ನಡೆಸಿದೆ. ಪಾಕಿಸ್ತಾನದಲ್ಲಿರುವ ಒಟ್ಟು 9 ಭಯೋತ್ಪಾದಕ ಅಡಗುತಾಣಗಳ ಮೇಲೆ ಅಟ್ಯಾಕ್ ಮಾಡಲಾಗಿದ್ದು, 80ಕ್ಕೂ ಹೆಚ್ಚು ಭಯೋತ್ಪಾದಕರು ಜೀವ ಕಳೆದುಕೊಂಡಿರುವ ಬಗ್ಗೆ ವರದಿಯಾಗಿದೆ.

ಆದ್ದರಿಂದ ಮುಂಜಾಗ್ರತ ಕ್ರಮವಾಗಿ ಬೆಂಗಳೂರಿನಿಂದ ಬೇರೆ ರಾಜ್ಯಗಳಿಗೆ ತೆರಳಬೇಕಿದ್ದ ವಿಮಾನಗಳನ್ನು ರದ್ದು ಮಾಡಲಾಗಿದೆ.

ಈ ಬಗ್ಗೆ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ಟ್ವೀಟ್ ಮೂಲಕ ಮಾಹಿತಿ ನೀಡಿದೆ.

ಬೆಂಗಳೂರಿನಿಂದ ಜಮ್ಮು-ಕಾಶ್ಮೀರ, ರಾಜಸ್ಥಾನದ ಜೋಧಪುರ್, ಯುಪಿಯ ಅಯೋಧ್ಯೆ, ಲಖನೌ ಮತ್ತು ಘಾಜಿಯಾಬಾದ್ಗೆ ತೆರಳಬೇಕಿದ್ದ ವಿಮಾನಗಳ ಸಂಚಾರ ರದ್ದು ಮಾಡಲಾಗಿದೆ.

ಕೆಲವು ವಾಯುಯಾನ ಪ್ರದೇಶಗಳಲ್ಲಿ ವಿಮಾನ ಹಾರಾಟಕ್ಕೆ ನಿರ್ಬಂಧ ಜಾರಿಯಲ್ಲಿದ್ದು, ಇದು ನಮ್ಮ ಸಂಪರ್ಕ ಜಾಲದಲ್ಲಿನ ಕೆಲವು ವಿಮಾನಗಳ ಸೇವೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ.

## ರಾಷ್ಟ್ರಪತಿ ಭೇಟಿಯಾದ ಪ್ರಧಾನಿ: 'ಆಪರೇಷನ್ ಸಿಂಧೂರ' ಬಗ್ಗೆ ವಿಶ್ಲೇಷಣೆ ನೀಡಿದ ಮೋದಿ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಎಪ್ರಿಲ್ 22 ರಂದು ಸಂಭವಿಸಿದ ಉಗ್ರ ದಾಳಿಗೆ ಭಾರತ ಪ್ರತೀಕಾರ ತೀರಿಸಿಕೊಂಡಿದೆ. 'ಆಪರೇಷನ್ ಸಿಂಧೂರ್ ಹೆಸರಿನಲ್ಲಿ ಭಾರತೀಯ ಸೇನೆ ಕಾರ್ಯಾಚರಣೆ ನಡೆಸಿದ್ದು, ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ 9 ಉಗ್ರರ ನೆಲೆಗಳನ್ನು ಹೊಡೆದುರುಳಿಸಿದೆ. ಸದ್ಯ ಭಾರತೀಯ ಸೈನಿಕರ ಸಾಹಸ ಪ್ರದರ್ಶನಕ್ಕೆ ದೇಶದೆಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು



ಅವರನ್ನು ಪ್ರಧಾನಿ ನರೇಂದ್ರ ಮೋದಿ ಭೇಟಿಯಾಗಿ, ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನಾ ಪಡೆಗಳು ಪಾಕ್ ಮತ್ತು ಪಿಓಕೆ ಉಗ್ರರ ಅಡಗು ತಾಣಗಳ ಮೇಲೆ ನಡೆಸಿರುವ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆ ಬಗ್ಗೆ ಮಾಹಿತಿ ನೀಡಿದ್ದಾರೆ.

ಭಾರತೀಯ ಸಶಸ್ತ್ರ ಪಡೆಗಳು, ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಜಮ್ಮು-ಕಾಶ್ಮೀರದಲ್ಲಿ ಭಯೋತ್ಪಾದಕ ಮೂಲಸೌಕರ್ಯಗಳ ಮೇಲೆ ನಿಖರವಾದ ದಾಳಿ ನಡೆಸಿದ ಆಪರೇಷನ್ ಬಗ್ಗೆ ರಾಷ್ಟ್ರಪತಿಗೆ ವಿವರಿಸಿದ್ದಾರೆ.

ಸರ್ಕಾರ ಗುರುವಾರ ಸರ್ವಪಕ್ಷ ಸಭೆಯನ್ನೂ ಕರೆದಿದೆ.

ಭಾರತೀಯ ಸಶಸ್ತ್ರ ಪಡೆಗಳು ಬುಧವಾರ ಮುಂಜಾನೆ 'ಆಪರೇಷನ್ ಸಿಂಧೂರ್' ಅನ್ನು ಪ್ರಾರಂಭಿಸಿದವು. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ 26 ಪ್ರವಾಸಿಗರು ಸಾವನ್ನಪ್ಪಿದ್ದರು. ದಾಳಿಗೆ ತಕ್ಕ ಪ್ರತೀಕಾರ ತೀರಿಸಿಕೊಳ್ಳಲಾಗುವುದು ಎಂದು ಭಾರತ ಸರ್ಕಾರ ಪ್ರತಿಜ್ಞೆ ಮಾಡಿತ್ತು.

## ಭಾರತದ 'ಆಪರೇಷನ್ ಸಿಂಧೂರ' ಬಗ್ಗೆ ಮೆಚ್ಚಿ ಮಾತನಾಡಿದ ಯುಪಿ ಸಿಎಂ!

■ವಿಜಯಸಾಕ್ಷಿ ಸುದ್ದಿ, ಲಕ್ನೋ

ಭಾರತದ 'ಆಪರೇಷನ್ ಸಿಂಧೂರ' ಬಗ್ಗೆ ಯುಪಿ ಸಿಎಂ ಯೋಗಿ ಆದಿತ್ಯನಾಥ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಮಾತನಾಡಿದ ಅವರು, ಈ ಹಿಂದೆ ನಮ್ಮ ಸಹೋದರಿಯರ ಗಂಡಂದಿರನ್ನು ಕೊಂದವರು, ಈಗ ಭಾರತದ ಕ್ಷಿಪಣಿ ದಾಳಿಯಲ್ಲಿ ತಮ್ಮ ಇಡೀ ಕುಟುಂಬವನ್ನು ಕಳೆದುಕೊಂಡಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ತಮ್ಮ ಗಂಡಂದಿರನ್ನು ಕಳೆದುಕೊಂಡ ನಮ್ಮ ಸಹೋದರಿಯರ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ನಮ್ಮ ಭದ್ರತಾ ಪಡೆಗಳ ಭಾವನೆ ಏನೆಂಬುದು ಈ ಕಾರ್ಯಾಚರಣೆಯಿಂದ ಗೊತ್ತಾಗಿದೆ. ನಮ್ಮ ಸಹೋದರಿಯರು ಮತ್ತು ತಾಯಂದಿರ ಗಂಡಂದಿರನ್ನು ಕೊಲ್ಲಲು ಧೈರ್ಯ ಮಾಡಿದವರು ಈಗ ಕ್ಷಿಪಣಿ ದಾಳಿಯಲ್ಲಿ ತಮ್ಮ ಇಡೀ ಕುಟುಂಬವನ್ನು ಕಳೆದುಕೊಂಡಿದ್ದಾರೆ ಎಂದು ಸಿಎಂ ತಿಳಿಸಿದ್ದಾರೆ.

ಇನ್ನೂ ಕಳೆದ ಏ.22 ರಂದು ಪಹಲ್ಗಾಮ್‌ನಲ್ಲಿ ಪ್ರವಾಸಿಗರನ್ನು ಗುರಿಯಾಗಿಸಿ ಭಯೋತ್ಪಾದಕರು ನಡೆಸಿದ ದಾಳಿಯಲ್ಲಿ 26 ಮಂದಿ ಅಸುನೀಗಿದ್ದರು.

## 'ಆಪರೇಷನ್ ಸಿಂಧೂರ' ಪಾಕಿಸ್ತಾನಕ್ಕೆ ಎಚ್ಚರಿಕೆಯ ಗಂಟೆ: ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಷ್ಟ್ರೀಯ ಭದ್ರತೆ ವಿಷಯಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ ಗಂಟೆಯಾಗಿದೆ. ನಮ್ಮ ಸರ್ಕಾರ ನೂರಕ್ಕೆ ನೂರರಷ್ಟು ಸೇನೆ ಕೈಗೊಂಡಿರುವ ಕ್ರಮವನ್ನು ಬೆಂಬಲಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಭಾರತೀಯ ಸೇನೆ 'ಆಪರೇಷನ್ ಸಿಂಧೂರ' ಹೆಸರಿನಲ್ಲಿ ಪಾಕಿಸ್ತಾನದ ಭಯೋತ್ಪಾದಕರ ತಾಣಗಳ ಮೇಲೆ ದಾಳಿ ನಡೆಸಿದ ಹಿನ್ನೆಲೆ, ಬುಧವಾರ ಕಾವೇರಿ ನಿವಾಸದಲ್ಲಿ ಸಿಎಂ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ದೇಶದ ಸೇನಾಪಡೆ ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿ ಪರಾಕ್ರಮ ಮೆರೆದಿದೆ. ರಾಜ್ಯದ ಪರವಾಗಿ ಸೇನೆಗೆ ಅಭಿನಂದನೆ ಸಲ್ಲಿಸುತ್ತೇನೆ



ಎಂದು ಸಿಎಂ ಹೇಳಿದರು.

'ಆಪರೇಷನ್ ಸಿಂಧೂರ' ಹೆಸರಿನಲ್ಲಿ ಸುಮಾರು 9 ಭಯೋತ್ಪಾದಕ ನೆಲೆಗಳನ್ನು ಸೇನೆ ನಾಶಗೊಳಿಸಿದೆ. ಕೇವಲ ಉಗ್ರಗಾಮಿಗಳ ನೆಲೆಗಳ ಮೇಲೆ ಮಾತ್ರ ದಾಳಿ ನಡೆಸಲಾಗಿದೆ. ಅಮಾಯಕ ಜನರ ಸಾವು ನೋವು ತಪ್ಪಿಸಿದ್ದಾರೆ. ನಮ್ಮ ಸೈನಿಕರ ಕಾರ್ಯದಕ್ಷತೆಗೆ ದೊಡ್ಡ ಸಲಾಂ. ಈ ದಾಳಿಯನ್ನು ನಾವು ಸ್ವಾಗತಿಸುತ್ತೇವೆ ಎಂದರು.

ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಅಮಾಯಕ ಜನರ ಹತ್ಯೆ ನಡೆಸಿದ ಉಗ್ರರನ್ನು ಬೆಂಬಲಿಸುವವರು, ಸಾಕುವವರು ಸಹ ಪಾಕಿಸ್ತಾನದವರೇ ಎಂಬುವುದು ಸ್ಪಷ್ಟವಾಗಿದೆ. ನಾವು ಕೇಂದ್ರ ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಂಪೂರ್ಣ ಬೆಂಬಲವನ್ನು ವ್ಯಕ್ತಪಡಿಸಿದ್ದೇವೆ. ರಾಜ್ಯದಲ್ಲಿ ಸುರಕ್ಷತೆಯ ಕುರಿತು ಎಲ್ಲಾ ಎಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದ್ದೇವೆ ಎಂದು ತಿಳಿಸಿದರು. ಉಗ್ರರ ಮೇಲಿನ ದಾಳಿ ಹಿನ್ನೆಲೆ ಸಂವಿಧಾನ ಉಳಿಸಿ ಅಡಿಯಲ್ಲಿ ರಾಯಚೂರಿನಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನಾ ಕಾರ್ಯಕ್ರಮನ್ನು ರದ್ದುಗೊಳಿಸಲಾಗಿದೆ ಎಂದು ಸಿಎಂ ಇದೇ ವೇಳೆ ಹೇಳಿದರು.

ಪಹಲ್ಗಾಮ್‌ನಲ್ಲಿ ಹತ್ಯಾಕಾಂಡ ನಡೆಸಿದ ಉಗ್ರಗಾಮಿಗಳು ಪಾಕಿಸ್ತಾನಕ್ಕೆ ಸೇರಿದವರೆಂದು ಜಗಜ್ಜಾಹೀರಾಗಿದ್ದರೂ, ಪಾಕಿಸ್ತಾನ ಅದನ್ನು ಒಪ್ಪಿಕೊಂಡು ಕ್ರಮಕೈಗೊಳ್ಳುವ ಭರವಸೆ ನೀಡದೆ ಹಠಮಾರಿ ಧೋರಣೆ ತಳೆದಿರುವ ಕಾರಣದಿಂದಾಗಿ ಭಾರತಕ್ಕೆ ಬೇರೆ ಆಯ್ಕೆಗಳಿರಲಿಲ್ಲ ಎಂದು ಸಿಎಂ ಹೇಳಿದರು.

ಉಗ್ರಗಾಮಿಗಳ ನೆಲೆಗಳನ್ನು ಧೂಳೀಪಟ ಮಾಡಿ ಉಗ್ರರನ್ನು ಶಿಕ್ಷಿಸಿದ ನಮ್ಮ ಸೈನಿಕರ ಧೀ-ರೋದ್ದಾತ ಪರಾಕ್ರಮದಿಂದ ಪಹಲ್ಗಾಮ್ ಹತ್ಯಾಕಾಂಡದಲ್ಲಿ ತಮ್ಮವರನ್ನು ಕಳೆದುಕೊಂಡ ಕುಟುಂಬಗಳಿಗೆ ತುಸು ನೆಮ್ಮದಿ, ಸಮಾಧಾನ ಸಿಕ್ಕಿರಬಹುದೆಂದು ಭಾವಿಸಿದ್ದೇನೆ. ಇದು ಪಾಕಿಸ್ಥಾನಕ್ಕೆ ಮಾತ್ರವಲ್ಲ, ಭಾರತದ ಜೊತೆ ಈ ರೀತಿಯ ಕಿಡಿಗೇಡಿತನವನ್ನು ನಡೆಸುವ ನೆರೆಯ ಎಲ್ಲಾ ದೇಶಗಳಿಗೆ ಕೂಡಾ ಎಚ್ಚರಿಕೆಯ ಗಂಟೆಯಾಗಿದೆ ಎಂದರು. ಇದು ನಾವೆಲ್ಲರೂ ಒಗ್ಗಟ್ಟಿನಿಂದ ಮತ್ತು ಅಷ್ಟೇ ಎಚ್ಚರದಿಂದ ಇರುವ ಕಾಲ. ರಾಜ್ಯದ ಭದ್ರತಾ ವ್ಯವಸ್ಥೆ ಮೇಲೆ ನಿಗಾ ಇಡುವಂತೆ ಪೊಲೀಸ್ ವರಿಷ್ಠರಿಗೆ ತಿಳಿಸಿದ್ದೇನೆ. ನಮ್ಮ ಸರ್ಕಾರ ಕೇಂದ್ರ ಸರ್ಕಾರದ ಜೊತೆಯಲ್ಲಿಯೂ ಸಂಪರ್ಕದಲ್ಲಿರುತ್ತದೆ. ಅಲ್ಲಿಂದ ಬರುವ ಸೂಚನೆಗಳನ್ನು ಪಾಲಿಸಲಾಗುತ್ತದೆ. ಯಾರೂ ಭಯಭೀತರಾಗುವ ಅವಶ್ಯಕತೆ ಇಲ್ಲ. ಕಟ್ಟುನಿಟ್ಟಿನ ಕ್ರಮಗಳೊಂದಿಗೆ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸ್ಫೂರ್ತಿ ಮಾನಮ್ಮನವರ ಸಾಧನೆ

# ಗದಗ ಜಿಲ್ಲೆಗೆ ದ್ವಿತೀಯ ಸ್ಥಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹೊಳೆಇಟಗಿ ಗ್ರಾಮದ ಅಂಬಿಗ ಸಮಾಜದ ಹಾಗೂ ಗೊಜನೂರ ಮೊರಾರ್ಜಿ ದೇಸಾಯಿ ವಸತಿಯು ಶಾಲೆಯ ವಿದ್ಯಾರ್ಥಿನಿ ಸ್ಫೂರ್ತಿ ಮಾನಮ್ಮನವರ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ 622/625 ಅಂಕ ಗಳಿಸಿ ಗದಗ ಜಿಲ್ಲೆಗೆ ದ್ವಿತೀಯ ಸ್ಥಾನ ಮತ್ತು ರಾಜ್ಯಕ್ಕೆ ಸ್ಥಾನ ನಾಲ್ಕನೇ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾಳೆ.

ಗದಗ ಜಿಲ್ಲಾ ಅಂಬಿಗ ಸಮಾಜದ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ಹಾಗೂ ಪ್ರಧಾನ



ಕಾರ್ಯದರ್ಶಿ ಸಂಗಮೇಶ ಹಾದಿಮನಿಯವರು ಸಾಧಕ ವಿದ್ಯಾರ್ಥಿನಿಯನ್ನು ಅಭಿನಂದಿಸಿ, ಸರ್ಕಾರಿ ವಸತಿಯುತ ಶಾಲೆಯಲ್ಲಿ ಅಧ್ಯಯನಗೈದು ಈ ಯಶಸ್ಸು ಸಾಧಿಸಿದ್ದು, ಸಮಾಜದ ಹಾಗೂ ಇತರೆ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾಳೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಪ್ರಕಾಶ ಮಾನಮ್ಮನವರ, ನಿಂಗಪ್ಪ ಮಾನಮ್ಮನವರ, ಮಹಾಂತೇಶ ಮಾನಮ್ಮನವರ, ಗುರು ತಿರ್ಲಾಪೂರ, ಹರೀಶ ಬಾರಕೇರ, ಅಮಿತ ಪೂಜಾರ, ರಾಜೂ ಪೂಜಾರ, ಮಂಜುನಾಥ ಗುಡಿಸಾಗರ, ಮಹಿಳಾ ಅಧ್ಯಕ್ಷರಾದ ಸುಜಾತಾ ಗುಡಿಸಾಗರ, ರವಿ ಗುಡಿಸಾಗರ, ಚಂದ್ರಕಾಂತ ಬಾರಕೇರ ಹಾಗೂ ಹೊಳೆಇಟಗಿ ಗ್ರಾಮಸ್ಥರು ಅಭಿನಂದಿಸಿದ್ದಾರೆ.

# ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ


■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನರಸಾಪುರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಸಿವಿಲ್, ಮೆಕ್ಯಾನಿಕಲ್, ಇ&ಸಿ ಹಾಗೂ ಕಂಪ್ಯೂರ್ ಸೈನ್ಸ್ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್-ಲೈನ್ ಮೂಲಕ ಮೆರಿಟ್ ಹಾಗೂ ರೋಷ್ಟರ್ ಆಧಾರದ ಮೇರೆಗೆ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ dtek.karnataka.gov.in ಅಥವಾ dtetech.karnataka.gov.in/ kartechnical ಗಳಲ್ಲಿ ಅರ್ಜಿ ನಮೂನೆ ಮತ್ತು ಇ-ಮಾಹಿತಿ ಪುಸ್ತಕವನ್ನು ಡೌನಲೋಡ್ ಮಾಡಿಕೊಂಡು ಅರ್ಜಿಯನ್ನು ಸಲ್ಲಿಸಬಹುದು.

ಇ-ಮಾಹಿತಿ ಪುಸ್ತಕದಲ್ಲಿರುವ ಸೂಚನೆಗಳನ್ವಯ ಸಂಪೂರ್ಣ ಭರ್ತಿ ಮಾಡಿಕೊಂಡು ಅವಶ್ಯವಿರುವ ಎಲ್ಲ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಸಂಸ್ಥೆಗೆ ಬಂದು ಅರ್ಜಿಯನ್ನು ಸಲ್ಲಿಸಿ ಲಭ್ಯವಿರುವ ಸೀಟುಗಳಿಗೆ ಆಫ್-ಲೈನ್ ಮೂಲಕ ಮೆರಿಟ್ ಹಾಗೂ ರೋಷ್ಟರ್ ಆಧಾರದ ಮೇರೆಗೆ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಛೇರಿ ಅವಧಿಯಲ್ಲಿ ಪಡೆಯಬಹುಸು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ಗಾಜಾದಾದ್ಯಂತ ದಾಳಿ ತೀವ್ರಗೊಳಿಸಿದ ಇಸ್ರೇಲ್; 40ಕ್ಕೂ ಹೆಚ್ಚು ಪ್ಯಾಲೆಸ್ತೀನಿಯನ್ನರು ಸಾವು



■ವಿಜಯಸಾಕ್ಷಿ ಸುದ್ದಿ, ಇಸ್ರೇಲ್


ಗಾಜಾದಾದ್ಯಂತ ಇಸ್ರೇಲ್ ನಡೆಸಿದ ದಾಳಿಯಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಕನಿಷ್ಠ 48 ಜನರು ಸಾವನ್ನಪ್ಪಿದ್ದಾರೆ ಎಂದು ಆಸ್ಪತ್ರೆ ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ. ಇಸ್ರೇಲ್ ಆರಂಭಿಸಿರುವ ವಿನಾಶಕಾರಿ ಯುದ್ಧವು ತನ್ನ 20 ನೇ ತಿಂಗಳಿಗೆ ಕಾಲಿಡುತ್ತಿದ್ದು, ಹಮಾಸ್ ವಿರುದ್ಧ ತನ್ನ ಕಾರ್ಯಾಚರಣೆಯನ್ನು ಹೆಚ್ಚಿಸಲು ಸಿದ್ಧತೆ ನಡೆಸುತ್ತಿದೆ.

ಸ್ಥಳಾಂತರಗೊಂಡ ನೂರಾರು ಪ್ಯಾಲೆಸ್ತೀನಿಯನ್ನರಿಗೆ ಆಶ್ರಯ ನೀಡುತ್ತಿರುವ ಶಾಲೆಯ ಮೇಲೆ ಮಂಗಳವಾರ ರಾತ್ರಿ ನಡೆದ ಒಂದು ದಾಳಿಯಲ್ಲಿ 27 ಜನರು ಸಾವನ್ನಪ್ಪಿದ್ದಾರೆ ಎಂದು ಅಲ್-ಅಕ್ಸಾ ಆಸ್ಪತ್ರೆಯ ಅಧಿಕಾರಿಗಳು ತಿಳಿಸಿದ್ದಾರೆ. ಇದರಲ್ಲಿ ಒಂಬತ್ತು ಮಹಿಳೆಯರು ಮತ್ತು ಮೂವರು ಮಕ್ಕಳು ಸೇರಿದ್ದಾರೆ. ಯುದ್ಧ ಪ್ರಾರಂಭವಾದಾಗಿನಿಂದ ಶಾಲೆಯ ಮೇಲೆ ದಾಳಿ ನಡೆಸುತ್ತಿರುವುದು ಇದು ಐದನೇ ಬಾರಿ. ಇತರ ಹಲವಾರು ಪ್ರದೇಶಗಳಲ್ಲಿನ ಗುರಿಗಳ ಮೇಲಿನ ದಾಳಿಯಲ್ಲಿ ಕನಿಷ್ಠ 21 ಜನರು ಸಾವನ್ನಪ್ಪಿದ್ದಾರೆ.

ಮಧ್ಯ ಗಾಜಾದಲ್ಲಿ ನಿರ್ಮಿಸಲಾದ ನಗರ ನಿರಾಶ್ರಿತರ ಶಿಬಿರವಾದ ಬುರೈಜ್‌ನಲ್ಲಿರುವ ಶಾಲಾ ಆಶ್ರಯದ ಮೇಲಿರುವ ಕತ್ತಲೆಯ ಆಕಾಶವನ್ನು ದೊಡ್ಡ ಹೊಗೆಯ ಕಂಬ ಏರಿತು ಮತ್ತು ಬೆಂಕಿಯು ಜನರನ್ನು ಬೆಂಕಿಯಿಂದ ಹೊರತೆಗೆಯಲು ಧಾವಿಸಿತು.

ಇಸ್ರೇಲಿ ಮಿಲಿಟರಿ ದಾಳಿಯ ಬಗ್ಗೆ ತಕ್ಷಣದ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಶಾಲೆಗಳು ಸೇರಿದಂತೆ ನಾಗರಿಕ ಮೂಲಸೌಕರ್ಯದಿಂದ ಕಾರ್ಯನಿರ್ವಹಿಸುವುದರಿಂದ ಇಸ್ರೇಲ್ ಸಾವಿನ ಸಂಖ್ಯೆಗೆ ಹಮಾಸ್ ಅನ್ನು ದೂಷಿಸುತ್ತದೆ. ಪ್ಯಾಲೆಸ್ತೀನಿಯನ್ ಎನ್ಕ್ಲೇವ್‌ನಲ್ಲಿ ತನ್ನ ಕಾರ್ಯಾಚರಣೆಯನ್ನು ತೀವ್ರಗೊಳಿಸುವ ಯೋಜನೆಯನ್ನು ಇಸ್ರೇಲ್ ಅನುಮೋದಿಸಿದ ಕೆಲವು ದಿನಗಳ ನಂತರ ಹೊಸ ರಕ್ತಪಾತ ಸಂಭವಿಸಿದೆ, ಇದರಲ್ಲಿ ಗಾಜಾವನ್ನು ವಶಪಡಿಸಿಕೊಳ್ಳುವುದು, ವಶಪಡಿಸಿಕೊಂಡ ಪ್ರದೇಶಗಳನ್ನು ಹಿಡಿದಿಟ್ಟುಕೊಳ್ಳುವುದು, ಪ್ಯಾಲೆಸ್ತೀನಿಯನ್ನರನ್ನು ದಕ್ಷಿಣ ಗಾಜಾಕ್ಕೆ ಬಲವಂತವಾಗಿ ಸ್ಥಳಾಂತರಿಸುವುದು. ಖಾಸಗಿ ಭದ್ರತಾ ಕಂಪನಿಗಳೊಂದಿಗೆ ಸಹಾಯ ವಿತರಣೆಯ ನಿಯಂತ್ರಣವನ್ನು ತೆಗೆದುಕೊಳ್ಳುವುದು ಸೇರಿವೆ.

## ಕೊನೆಗೂ ಸೇಡು ತೀರಿಸಿಕೊಂಡ ಭಾರತ! ಪಾಕ್‌ನ 9 ಉಗ್ರರ ನೆಲೆಗಳು ಉಡೀಸ್




■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅದು ಎಪ್ರಿಲ್ 22..ಭಾರತ ಎಂದೂ ಮರೆಯದ ದಿನ. ತಮ್ಮ-ತಮ್ಮ ಕುಟುಂಬದ ಜೊತೆ ಎಂಜಾಯ್ ಮಾಡಲು ಜಮ್ಮು-ಕಾಶ್ಮೀರಕ್ಕೆ ಬಂದಿದ್ದ ಭಾರತೀಯರನ್ನು ಗುಂಡಿಕ್ಕಿ ಕೊಂದ ಗಳಿಗೆ. ನೀನು ಹಿಂದೂನಾ? ಎಂದು ಪ್ಯಾಂಟ್ ಬಿಚ್ಚಿಸಿ ಉಗ್ರರು ಭಾರತೀಯರ ಮೇಲೆ ದುಷ್ಕೃತ್ಯ ಮೆರೆದ ಕರಾಳ ದಿನ. ಈ ಉಗ್ರರ ದಾಳಿಯಿಂದ ಸುಮಾರು 26 ಭಾರತೀಯರು ಅಸುನೀಗಿದರು. ಈ ಘಟನೆಗಳು ಒಮ್ಮೆ ನೆನಪಿಸಿಕೊಂಡರೆ ಪ್ರತಿಯೊಬ್ಬ ಭಾರತೀಯನ ರಕ್ತ ಕುದಿಯದೇ ಇರದು. ಎಸ್ ಈ ನರಮೇಧಕ್ಕೆ ಕೊನೆಗೂ ಭಾರತ ಸೇಡು ತೀರಿಸಿಕೊಂಡಿದೆ.

ಎಸ್, ಮಂಗಳವಾರ ತಡರಾತ್ರಿ ಭಾರತ ಪಾಕಿಸ್ತಾನದಲ್ಲಿರುವ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸುವ ಮೂಲಕ ಪಹಲ್ಗಾಮ್ ನರಮೇಧಕ್ಕೆ ಪ್ರತೀಕಾರ ತೀರಿಸಿದೆ. ಉಗ್ರರ 9 ನೆಲೆಗಳ ಮೇಲೆ ಆಪರೇಷನ್ ಸಿಂಧೂರ ಹೆಸರಿನಲ್ಲಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಒಳಗಡೆ ನುಗ್ಗಿ ಏರ್‌ಸ್ಟ್ರೈಕ್ ಮಾಡಿ ಧ್ವಂಸ ಮಾಡಿದೆ. ಭಾರತ ಪಾಕಿಸ್ತಾನದ ಯಾವುದೇ ಮಿಲಿಟರಿ ನೆಲೆಗಳನ್ನು ಗುರಿಯಾಗಿಸದೇ ಕೇವಲ ಉಗ್ರರ ನೆಲೆಗಳನ್ನು ಮಾತ್ರ ಗುರಿಯಾಗಿಸಿ ದಾಳಿ ನಡೆಸಿದ್ದು ವಿಶೇಷ. 9 ಉಗ್ರರ ನೆಲೆಗಳ ಪೈಕಿ ಕೆಲವು 100 ಕಿ.ಮೀ ದೂರದಲ್ಲಿ ಇದ್ದವು. ದಾಳಿಗೊಳಗಾದ ಶಿಬಿರಗಳು ಭಾರತದ ವಿರುದ್ಧದ ಹಿಂದಿನ ಅನೇಕ ದಾಳಿಗಳಿಗೆ ನೇರವಾಗಿ ಸಂಬಂಧಿಸಿವೆ. ದಾಳಿಯಲ್ಲಿ 100ಕ್ಕೂ ಹೆಚ್ಚು ಉಗ್ರರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

## ಜಮ್ಮು ಕಾಶ್ಮೀರದಲ್ಲಿ ಕನಿಷ್ಠ 7 ಸಾವು, 38 ಜನರಿಗೆ ಗಾಯ

■ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ

ಜಮ್ಮು ಕಾಶ್ಮೀರದ ಗಡಿ ನಿಯಂತ್ರಣ ರೇಖೆ ಮತ್ತು ಅಂತಾರಾಷ್ಟ್ರೀಯ ಗಡಿಗಳಲ್ಲಿ ಪಾಕಿಸ್ತಾನ ಸೇನೆ ನಡೆಸಿದ ಗುಂಡಿನ ದಾಳಿಯಲ್ಲಿ ಮಹಿಳೆ ಮತ್ತು ಇಬ್ಬರು ಮಕ್ಕಳು ಸೇರಿದಂತೆ ಏಳು ಮಂದಿ ಭಾರತೀಯ ನಾಗರಿಕರು ಸಾವನ್ನಪ್ಪಿದ್ದು, 38 ಜನರು ಗಾಯಗೊಂಡಿದ್ದಾರೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಒಂಬತ್ತು ಭಯೋತ್ಪಾದಕ ತಾಣಗಳ ಮೇಲೆ ಭಾರತ ಕ್ಷಿಪಣಿ ದಾಳಿ ನಡೆಸಿದ ಬೆನ್ನಲ್ಲೇ, ಪಾಕಿಸ್ತಾನದ ಪಡೆಗಳು ಕದನ ವಿರಾಮ ಉಲ್ಲಂಘಿಸಿ ಭಾರತೀಯ ನಾಗರಿಕ ಮೇಲೆ ದಾಳಿ ಮಾಡಿವೆ.

ಜಮ್ಮು ಕಾಶ್ಮೀರದ ಪೂಂಚ್ ಜಿಲ್ಲೆಯಲ್ಲಿ ಏಳು ಮಂದಿ ಸಾವನ್ನಪ್ಪಿದ್ದು, 25 ಜನರು ಗಾಯಗೊಂಡಿದ್ದಾರೆ. ಬಾರಾಮುಲ್ಲಾ ಜಿಲ್ಲೆಯ ಉರಿ ಸೆಕ್ಟರ್‌ನಲ್ಲಿ ಹತ್ತು ಜನರು ಗಾಯಗೊಂಡಿದ್ದಾರೆ ಮತ್ತು ರಾಜೌರಿ ಜಿಲ್ಲೆಯಲ್ಲಿ ಮೂವರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


"2025ರ ಮೇ 6-7ರ ರಾತ್ರಿ, ಪಾಕಿಸ್ತಾನ ಸೇನೆಯು ಗಡಿ ನಿಯಂತ್ರಣ ರೇಖೆಯಾದ್ಯಂತ ಮತ್ತು ಜಮ್ಮು ಮತ್ತು ಕಾಶ್ಮೀರದ ಐಬಿ ಪೋಸ್ಟ್‌ಗಳಿಂದ ಫಿರಂಗಿ ಶೆಲ್ ಸೇರಿದಂತೆ ಅನಿಯಂತ್ರಿತ ಗುಂಡಿನ ದಾಳಿ ನಡೆಸಿದೆ" ಎಂದು ಭಾರತೀಯ ಸೇನೆ ತಿಳಿಸಿದೆ. "ಅನಿಯಂತ್ರಿತ ಗುಂಡಿನ ದಾಳಿ ಮತ್ತು ಶೆಲ್ ದಾಳಿಯಲ್ಲಿ ಮೂವರು ಅಮಾಯಕ ನಾಗರಿಕರು ಪ್ರಾಣ ಕಳೆದುಕೊಂಡಿದ್ದಾರೆ" ಎಂದು ಸೇನೆಯ ಅಧಿಕಾರಿಗಳು ಹೇಳಿದ್ದಾರೆ.

ಭಾರತೀಯ ಸೇನೆ ಬುಧವಾರ ಬೆಳಗಿನ ಜಾವ 'ಆಪರೇಷನ್ ಸಿಂಧೂರ್' ಎಂಬ ಹೆಸರಿನಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಒಂಬತ್ತು ಭಯೋತ್ಪಾದಕ ತಾಣಗಳ ಮೇಲೆ ವಾಯು ದಾಳಿ ನಡೆಸಿದೆ. ಭಯೋತ್ಪಾದಕ ತಾಣಗಳ ಮೇಲಿನ ಈ ನಿಖರವಾದ ದಾಳಿಗೆ 'ಕ್ಷಿಪಣಿ'ಗಳನ್ನು ಬಳಸಲಾಗಿದೆ ಎಂದು ಸೇನೆ ಹೇಳಿದೆ.

# ಪದವಿ ಪ್ರವೇಶ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025–26ನೇ ಸಾಲಿನ ಪದವಿ ತರಗತಿಗಳಿಗೆ ಪ್ರವೇಶ ಪ್ರಾರಂಭವಾಗಿವೆ. ಬಿಎ, ಬಿಎಸ್ಸಿ, ಬಿಕಾಂ, ಬಿಬಿಎ, ಬಿಸಿಎ ಸೇರಿದಂತೆ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ನೀಡಲಾಗುವುದು. ಜಿಲ್ಲೆಯ ಲೀಡ್ ಕಾಲೇಜು ಇದಾಗಿದ್ದು, ಬಿಎ ಪದವಿಯಲ್ಲಿ ಪತ್ರಿಕೋದ್ಯಮ, ಶಿಕ್ಷಣ, ಅರ್ಥಶಾಸ್ತ್ರ, ಇತಿಹಾಸ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ, ಕನ್ನಡ, ಇಂಗ್ಲಿಷ್ ಐಚ್ಛಿಕ ವಿಷಯಗಳನ್ನು ನುರಿತ ಬೋಧಕರು ಬೋಧಿಸುವರು. ಪ್ರತಿ ವರ್ಷ ಪ್ರವೇಶಕ್ಕೆ ಬೇಡಿಕೆ ಹೆಚ್ಚುತ್ತಿದ್ದು, ಮೊದಲು ಬಂದು ಪ್ರವೇಶ ಪಡೆದವರಿಗೆ ಆದ್ಯತೆ ನೀಡಲಾಗುವುದು. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಡಾ.ಡಿ.ಎಚ್. ನಾಯ್ಕ ಪ್ರಾಂಶುಪಾಲರು (ಮೊಬೈಲ್: 94488 77085) ಇವರನ್ನು ಸಂಪರ್ಕಿಸಲು ಪ್ರಕಟಣೆ ಕೋರಿದೆ.



ಗದಗ ತಾಲೂಕಿನ ಅಡವಿಸೋಮಾಪುರ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಪವಿತ್ರ ಪ್ರ.ಹೊಸಳ್ಳಿ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಸದ್ಯಸರಾದ ರಾಜು ಪೆಂಡಾರ್, ತಾ.ಪಂ ಮಾಜಿ ಸದ್ಯಸರಾದ ಪ್ರಹ್ಲಾದ ಹೊಸಳ್ಳಿ ಮುಂತಾದವರು ಭಾಗವಹಿಸಿದ್ದರು.

### ರಾಣೆಬೆನ್ನೂರು ತಾಲೂಕಿನ ಹಲಗೇರಿ ಗ್ರಾಮದಿಂದ ಪಾದಯಾತ್ರೆಯಲ್ಲಿ ಬಂದ ಯುವಕರು

# ಸೇವೆಯಲ್ಲೇ ಸಾರ್ಥಕತೆ ಕಾಣುವ ಯುವಪಡೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬುಧವಾರದಿಂದ ಮೂರು ದಿನಗಳ ಕಾಲ ನಡೆಯುವ ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವಕ್ಕೆ ನಾಡಿನಾದ್ಯಂತ ಭಕ್ತ ಸಮೂಹ ಹರಿದು ಬರುತ್ತಿದೆ. ಸೋಮೇಶ್ವರ ದೇವರಿಗೆ ನಾಡಿನಾದ್ಯಂತ ಲಕ್ಷಾಂತರ ಭಕ್ತರು ಇದ್ದು, ನಾನಾ ಭಾಗಗಳಿಂದ ಜಾತ್ರೆ, ಯುಗಾದಿ, ನವರಾತ್ರಿ, ಕಾರ್ತಿಕ ಇತ್ಯಾದಿ ಸಂದರ್ಭದಲ್ಲಿ ದೇವಸ್ಥಾನಕ್ಕೆ ಆಗಮಿಸಿ ಭಕ್ತಿ ಸಮರ್ಪಣೆ ಮಾಡಿಕೊಳ್ಳುತ್ತಾರೆ.

ಈ ನಿಟ್ಟಿನಲ್ಲಿ ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲೂಕಿನ ಹಲಗೇರಿ ಗ್ರಾಮದಿಂದ ಗ್ರಾ.ಪಂ ಸದಸ್ಯ ಪ್ರವೀಣ ಕಡೂರ ಅವರ ನೇತೃತ್ವದ 15–16 ಯುವಕರ ತಂಡವು ಹಲಗೇರಿಯಿಂದ ಪಾದಯಾತ್ರೆಯ ಮೂಲಕ ಮಂಗಳವಾರ ಸಂಜೆ ದೇವಸ್ಥಾನಕ್ಕೆ ಆಗಮಿಸಿದರು.



ಪ್ರತಿವರ್ಷ ಜಾತ್ರಾ ಸಮಯದಲ್ಲಿ ಸೋಮೇಶ್ವರನ ಸನ್ನಿಧಿಗೆ ಆಗಮಿಸುವ ಈ ತಂಡದ ಸದಸ್ಯರ ಸಂಖ್ಯೆ ಪ್ರತಿವರ್ಷ ಹೆಚ್ಚುತ್ತಿರುವದು ವಿಶೇಷವಾಗಿದೆ. ಜಾತ್ರೆಗೆ ಆಗಮಿಸುವ ಈ ಯುವಕರು ಸ್ವಲ್ಪ ವಿಶ್ರಾಂತಿ ಪಡೆದುಕೊಂಡು ನಂತರ ಜಾತ್ರೆಯ ದಿನವಾದ ಬುಧವಾರ ದೇವಸ್ಥಾನದಲ್ಲಿ ಅಲ್ಲಲ್ಲಿ ಇರುವ ಕಸವನ್ನು ಸ್ವಚ್ಛಗೊಳಿಸುವದು ಮತ್ತು ಅಂದು ಜಾತ್ರೆಗೆ ಬರುವ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡುವದು ಮತ್ತು ಸಾವಿರಾರು ಭಕ್ತರಿಗೆ ಅನ್ನಪ್ರಸಾದ ಸರಿಯಾಗಿ ದೊರಕುವಂತೆ ಮಾಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದು, ಯುವಕರಿಗೆ ಮಾದರಿಯಾಗಿದ್ದಾರೆ.

ಅರುಣ ಕಡೂರ, ಪ್ರಶಾಂತ ಕಡೂರ, ಶಂಭು, ಭರತ್, ಶರತ್, ವಿಶ್ವ, ಬಸವರಾಜ, ಟಿ.ಉಮೇಶ, ಸೋಮನಗೌಡ್ರ, ಶಿವು, ಸೋಮು, ಬಸವಲಿಂಗಪ್ಪ, ಕಿರಣ, ಬಸವರಾಜ ಎಂ., ನಾಗರಾಜ, ರಾಘವೇಂದ್ರ ಸೇರಿದಂತೆ ಯುವಕರು ಪಾದಯಾತ್ರೆಯ ಮೂಲಕ ಆಗಮಿಸಿದ್ದು, ಎರಡು ದಿನಗಳ ಕಾಲ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಿದ್ದಾರೆ. ಸಂಜೆ ಪ್ರಸಾದ ಸೇವೆ ಮುಗಿದ ಮೇಲೆ ಅಡುಗೆ ಸಾಮಗ್ರಿಗಳ ಸ್ವಚ್ಛತೆ ಮತ್ತು ದೇವಸ್ಥಾನದ ಆವರಣದ ಸ್ವಚ್ಛತೆಯಲ್ಲಿ ಬೇಸರವಿಲ್ಲದೆ ತೊಡಗಿಸಿಕೊಳ್ಳುತ್ತಿರುವದು ವಿಶೇಷವಾಗಿದೆ.

> ಪ್ರತಿವರ್ಷ ಜಾತ್ರೆಯ ವೇಳೆ ನಮ್ಮ ಮನೆ ದೇವರು ಸೋಮೇಶ್ವರನ ಸನ್ನಿಧಿಗೆ ಪಾದಯಾತ್ರೆಯ ಮೂಲಕ ಬರುವ ಸಂಪ್ರದಾಯವನ್ನು ಪಾಲಿಸಿಕೊಂಡು ಬರುತ್ತಿದ್ದೇವೆ. ಬರಿಗಾಲಿನಲ್ಲಿ ಹಲಗೇರಿಯಿಂದ ಎರಡು ದಿನ ಮುಂಚಿತವಾಗಿ ಹೊರಟು ಜಾತ್ರೆಯ ವೇಳೆಗೆ ಇಲ್ಲಿ ತಲುಪುತ್ತಿದ್ದೇವೆ. ದೇವರ ಸೇವೆ ಮಾಡುವದು ನಮಗೆ ದೊರಕಿದ ಪುಣ್ಯವಾಗಿದೆ.
>
> **– ಪ್ರವೀಣ ಕಡೂರ.**
> ಗ್ರಾ.ಪಂ ಸದಸ್ಯ, ಹಲಗೇರಿ.

> ಹಲಗೇರಿ ಗ್ರಾಮದ ಯುವಕರ ತಂಡ ಮಾಡುತ್ತಿರುವ ಈ ಸೇವೆ ನಿಜಕ್ಕೂ ಶ್ಲಾಘನೀಯ. ಇದು ಯುವಕರಿಗೆ ಒಂದು ಮಾದರಿ ಎನ್ನಬಹುದು. ಇದರಿಂದ ಮತ್ತಷ್ಟು ಯುವಕರು ಪ್ರೇರಣೆಯಾಗಿ ಇಂತಹ ಧಾರ್ಮಿಕ–ಸಾಮಾಜಿಕ ಸೇವೆಯಲ್ಲಿ ತೊಡಗಿಕೊಳ್ಳುವದಕ್ಕೆ ಮುಂದಾಗಬೇಕು.
>
> **– ರಾಘವೇಂದ್ರ ಪೂಜಾರ.**
> ಅರ್ಚಕರು, ಶ್ರೀ ಸೋಮೇಶ್ವರ ದೇವಸ್ಥಾನ.

# ಬಾಲಕಿಯರ ಪ್ರೌಢಶಾಲೆ ಫಲಿತಾಂಶ ಶೇ.64.93

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಶೇ 64.93 ಆಗಿದೆ.

ಪರೀಕ್ಷೆಗೆ ಹಾಜರಾದ 77 ವಿದ್ಯಾರ್ಥಿಗಳಲ್ಲಿ 50 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಎ+ ಗ್ರೇಡ್‌ನಲ್ಲಿ 8 ವಿದ್ಯಾರ್ಥಿಗಳು, ಎ ಗ್ರೇಡಿನಲ್ಲಿ 7, ಬಿ+ ಗ್ರೇಡಿನಲ್ಲಿ 8, ಡಿ ಗ್ರೇಡಿನಲ್ಲಿ 12, ಸಿ+ ಗ್ರೇಡಿನಲ್ಲಿ 10, ಸಿ ಗ್ರೇಡಿನಲ್ಲಿ 5 ವಿದ್ಯಾರ್ಥಿನಿಯರು ತೇರ್ಗಡೆಯಾಗಿದ್ದಾರೆ. ಪ್ರಥಮ ಸ್ಥಾನ ಗಾಯತ್ರಿ ಹಳ್ಳಿ–ಶೇ. 96.16, ದ್ವಿತೀಯ ಸ್ಥಾನ ರೋಹಿಣಿ ಮಾಡಲಗೇರಿ–ಶೇ. 94.49 ಹಾಗೂ ತೃತೀಯ ಸ್ಥಾನ ಶಿವಲೀಲಾ ಅಬ್ಬಿಗೇರಿ ಶೇ. 94.24 ಅಂಕ ಗಳಿಸಿದ್ದಾರೆ. ವಿಶೇಷವಾಗಿ ವಿದ್ಯಾರ್ಥಿನಿ ರಮ್ಯಾ ಉಮಚಗಿ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕ ಗಳಿಸಿದ್ದು ಸಂತಸ ತಂದಿದೆ. ಶಾಲೆಗೆ ಹಾಗೂ ಗ್ರಾಮಕ್ಕೆ ಕೀರ್ತಿ ತಂದ ಈ ವಿದ್ಯಾರ್ಥಿಗಳನ್ನು ಮುಖ್ಯೋಪಾಧ್ಯಾಯರು, ಸಹ ಶಿಕ್ಷಕರು ಎಸ್.ಡಿ.ಎಂ.ಸಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ಗ್ರಾಮಸ್ಥರು ಅಭಿನಂದಿಸಿದ್ದಾರೆ.



# ದ್ವಾರದ ದುರಸ್ತಿ ಕಾರ್ಯ ಶೀಘ್ರ ಪ್ರಾರಂಭಿಸಿ

▸▸ ಮೊದಲನೇ ಪುಟದಿಂದ

ಸಂದರ್ಭದಲ್ಲಿ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ, ನಿಕಟಪೂರ್ವ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಜಾತ್ರಾ ಕಮಿಟಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ, ಚನ್ನಪ್ಪ ಜಗಲಿ, ಸಿದ್ದನಗೌಡ ಬಳ್ಳೊಳ್ಳಿ, ಶಂಕರ ಬಾಳಿಕಾಯಿ, ಪೂರ್ಣಾಜಿ ಖರಾಟೆ, ಫಕ್ಕೀರೇಶ ಮ್ಯಾಟಣ್ಣವರ, ವಿರೂಪಾಕ್ಷ ಆದಿ, ಬಾಬು ಅಳವಂಡಿ, ಸುರೇಶ ರಾಚನಾಯ್ಕರ್, ಜಯಕ್ಕ ಕಳ್ಳಿ, ವಿಜಯ ಕರಡಿ, ಮಯೂರಗೌಡ ಪಾಟೀಲ, ನಂದೀಶ, ಪ್ರಕಾಶ ಮುಳಗುಂದ, ಪ್ರಕಾಶ ಕೊಂಚಿಗೇರಿಮಠ ಮುಂತಾದವರಿದ್ದರು.

### ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಪ್ರೌಢಶಾಲೆಯ ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶ

# ದಾಖಲೆ ಮುರಿದ ಪತ್ರಿಕೆ ಹಂಚುವ ಹುಡುಗ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶಿಕ್ಷಣ ಸಂಸ್ಥೆ ಸ್ಥಾಪನೆಯಾದ 1965 ರಿಂದ 2024ರವರೆಗೂ ಎಸ್.ಎಸ್.ಎಲ್. ಸಿ ಪರೀಕ್ಷೆಯಲ್ಲಿ ಮಾಡಿದ ಎಲ್ಲ ದಾಖಲೆಯನ್ನು ಮುರಿದು ಶೇ 98.24 ರಷ್ಟು ಅಂಕ ಗಳಿಸಿದ

ಇಲ್ಲಿಯ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಪ್ರೌಢಶಾಲೆಯ ವಿದ್ಯಾರ್ಥಿ, ದಿನಪತ್ರಿಕೆ ಹಂಚುವ ಬಡ ರೈತನ ಪುತ್ರ ಪ್ರಕಾಶ ಬಸವರಾಜ ಪಾಪನಾಶಿ ಶಾಲೆಗೆ ಪ್ರಥಮ ಸ್ಥಾನ ಪಡೆದು ಶಾಲೆಯ ಇದುವರೆಗಿನ ದಾಖಲೆಗಳನ್ನು ಮುರಿದಿದ್ದಾನೆ.

625ಕ್ಕೆ 614 ಅಂಕ ಗಳಿಸಿದ ವಿದ್ಯಾರ್ಥಿಯು ಗದಗ ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದಾನೆ. ಈ ಹಿಂದೆ 2015ರಲ್ಲಿ ಮಳಗಿ ಎಂಬ ವಿದ್ಯಾರ್ಥಿ ಶೇ. 92 ಅಂಕ ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದ. ತನ್ನ ತಂದೆಯ ಕೃಷಿ ಕೆಲಸದಲ್ಲಿ ಸಹಾಯ ಮಾಡುತ್ತಾ ಬೆಳಗ್ಗೆ 6ಕ್ಕೆ ಇಲ್ಲಿಯ ಪತ್ರಿಕೆ ಏಜೆನ್ಸಿಯವರಿಂದ ಪತ್ರಿಕೆ ಪಡೆದು ಗ್ರಾಮದ ಮನೆ ಮನೆಗೆ ಪತ್ರಿಕೆ ಹಂಚಿ ಶ್ರದ್ಧೆಯಿಂದ ಶಾಲೆಗೆ ಹೋಗುತ್ತಿದ್ದ.

ವಿಶೇಷವಾಗಿ, ರಾತ್ರಿಯ ಸಮಯದಲ್ಲಿ ತನ್ನ ಅಚ್ಚುಮೆಚ್ಚಿನ ಗಣಿತ ಶಿಕ್ಷಕ ಬಿ.ಎಸ್. ಕಣವಿಯವರ ಮನೆಯಲ್ಲಿ ವಾಸವಾಗಿ ಅವರ ಮಾರ್ಗದರ್ಶನದಲ್ಲಿ ಪ್ರಕಾಶ ಈಗ ಶೇ. 98 ಅಂಕ ಗಳಿಸಿ ದಾಖಲೆ ಮಾಡಿದ್ದು ತಂದೆ ಬಸವರಾಜ ಹಾಗೂ ಗ್ರಾಮದ ಶಿಕ್ಷಣ ಅಭಿಮಾನಿಗಳಿಗೆ ಸಂತಸ ತಂದಿದೆ.

ಕನ್ನಡ, ಗಣಿತ, ಹಿಂದಿ ವಿಷಯದಲ್ಲಿ ಶೇ. 100 ಅಂಕ. ಇಂಗ್ಲೀಷ್ 99 ಅಂಕ, ವಿಜ್ಞಾನ 93, ಸಾಮಾಜಿಕ ವಿಜ್ಞಾನ 97 ಅಂಕ ಪಡೆದಿದ್ದಾನೆ ಎಂದು ಶಾಲೆಯ ಹಿರಿಯ ಶಿಕ್ಷಕ ಎ.ಎನ್. ಪೂಜಾರ ತಿಳಿಸಿದ್ದಾರೆ. ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳಿಗೆ ಜನತಾ ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಸರ್ವ ಸದಸ್ಯರು ಶಾಲಾ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.





> ಬಿ.ಎಚ್. ಪಾಟೀಲ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆ ವಿಭಾಗದ ಎಸ್.ಎಸ್.ಎಲ್.ಸಿ ಫಲಿತಾಂಶವು ಶೇ. 59.09 ಆಗಿದೆ. ಇಬ್ಬರು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದು, 11 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 8 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಹಾಗೂ 5 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ಪ್ರಕಾಶ ಪಾಪನಾಶಿ ಶೇ. 98.24 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದರೆ, ಲಕ್ಷ್ಮಣ ಒಂಟಿ ಶೇ. 92.80 ದ್ವಿತೀಯ ಹಾಗೂ ಶಿವರಾಜ ಹೊಟ್ಟಿ ಶೇ. 78.08 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ದರ್ಜೆಯಲ್ಲಿ ಪಾಸಾದ ಗದಗ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಂದ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅರ್ಜಿಯೊಂದಿಗೆ ಜಾತಿ ಪ್ರಮಾಣಪತ್ರ, ಅಂಕಪಟ್ಟಿ ಹಾಗೂ ಎರಡು ಪಾಸ್‌ಪೋರ್ಟ್ ಅಳತೆಯ ಪೋಟೋಗಳನ್ನು ಮೇ. 18ರ ಒಳಗಾಗಿ ಸಂಘದ ಕಾರ್ಯಾಲಯ–ಗಾನಯೋಗಿ ಪಂಡಿತ ಪುಟ್ಟರಾಜ ಬಸ್ ನಿಲ್ದಾಣ, ಮಳಿಗೆ ನಂ. 5, ಗದಗ ಇಲ್ಲಿ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದು.

ಪುರಸ್ಕಾರ ಕಾರ್ಯಕ್ರಮದ ದಿನಾಂಕವನ್ನು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು. ಮಾಹಿತಿಗಾಗಿ ಹೆಚ್ಚಿನ ಮೊ–8073909262, 7619454583, 8951537019, 8746014115 ಸಂಪರ್ಕಿಸುವಂತೆ ಜಿಲ್ಲಾಧ್ಯಕ್ಷ ಶಿವಾನಂದ ತಮ್ಮಣ್ಣವರ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಕೃಷಿ ಮುಖ್ಯ ಘಟಕಗಳಿಗೆ ಸಹಾಯಧನ

■ ವಿಜಯಸಾಕ್ಷಿ ಸುದ್ದಿ, ಗದಗ

ಸೆಕೆಂಡರಿ ಕೃಷಿಯ ಮುಖ್ಯ ಘಟಕಗಳನ್ನು ಪ್ರಾರಂಭಿಸಲು ವೈಯಕ್ತಿಕ ರೈತ ಫಲಾನುಭವಿಗಳಿಗೆ ಸಹಾಯಧನ, ರೈತ ಉತ್ಪಾದಕರ ಸಂಸ್ಥೆಗಳಿಗೆ/ಸ್ವಸಹಾಯ ಗುಂಪು/ಸಹಕಾರಿ ಸಂಘಗಳು/ಸೊಸೈಟಿಗಳು ಇತ್ಯಾದಿಗಳಿಗೆ ಸಹಾಯಧನ, ಸಮುದಾಯ ಸೆಕೆಂಡರಿ ಕೃಷಿ ಉದ್ದಿಮೆಗೆ ಸಂಬಂಧಿಸಿದ ಯಂತ್ರೋಪಕರಣಗಳ ಸ್ಥಾಪನೆಗೆ (ಬಾಡಿಗೆ ಆಧಾರಿತ ಸೇವಾ ಕೇಂದ್ರ ಮಾದರಿಯಂತೆ) ಸಹಾಯಧನ ಎಲ್ಲಾ ವರ್ಗದ ರೈತರಿಗೆ ಕಿರು ಉದ್ಯಮವನ್ನು ಸ್ಥಾಪಿಸಲು/ಮೇಲ್ದರ್ಜೆಗೇರಿಸಲು ಅನುವಾಗುವಂತೆ ಶೇ. 50ರ ಸಹಾಯಧನ ಅಥವಾ ಗರಿಷ್ಠ ಸಹಾಯಧನದ ಮೊತ್ತ ಮೀರದಂತೆ, ಅರ್ಹ ಯೋಜನಾ ಪ್ರಸ್ತಾವನೆಗಳಿಗೆ ಜಿಲ್ಲಾ ಅನುಷ್ಠಾನ ಸಮಿತಿಯಲ್ಲಿ ಅನುಮೋದನೆ ಪಡೆದು ಸಹಾಯಧನ ನೀಡಲಾಗುತ್ತಿದೆ. ಫಲಾನುಭವಿಗಳು ಉಳಿಕೆ ಶೇ.50ನ್ನು ಬ್ಯಾಂಕ್ ಸಾಲ/ ಸ್ವಂತ ಬಂಡವಾಳ ಹೂಡಿಕೆಯಿಂದ ಅನುಷ್ಠಾನ ಮಾಡಲು ಅವಕಾಶವಿರುತ್ತದೆ. ಸಹಾಯಧನವನ್ನು ಬ್ಯಾಂಕ್ ಸಾಲದ ಮುಖಾಂತರ (Backended subsidy) ಅಥವಾ ನೇರವಾಗಿ ಫಲಾನುಭವಿಗೆ ಅಥವಾ ಮಾರಾಟಗಾರರಿಗೆ (vendor) ನೀಡಲಾಗುವುದು. ಅರ್ಜಿ ಸಲ್ಲಿಸುವರು 18 ವರ್ಷ ಮೇಲ್ಪಟ್ಟವರಾಗಿರಬೇಕು, ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಅವಕಾಶವಿರುತ್ತದೆ. ಆಸಕ್ತ ರೈತರು ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಕ್ಕೆ/ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಡವಿಸೋಮಾಪುರ ಗ್ರಾಮದ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪವಿತ್ರಾ ಕೃಷ್ಣಪ್ಪ ಖಾನಾಪುರ 589 (ಶೇ. 94.34) ಅಂಕಗಳೊಂದಿಗೆ ಶಾಲೆಗೆ ಪ್ರಥಮ ಸ್ಥಾನ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದ್ದಾಳೆ.

ಇದೇ ಶಾಲೆಯ ಭಾಗ್ಯ ಜಗ್ಗಲ–572 ಅಂಕಗಳೊಂದಿಗೆ ದ್ವಿತಿಯ ಹಾಗೂ ಶಹನಾಜಬೇಗಂ ಲಕ್ಕುಂಡಿ–565 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಅಡವಿಸೋಮಾಪೂರದ ಶ್ರೀ ಕನಕದಾಸ ವಿವಿಧೋದ್ದೇಶಗಳು ಟ್ರಸ್ಟ್‌ನ ಅಧ್ಯಕ್ಷ ಮಂಜುನಾಥ ಜಡಿ ಮೌರ್ಯ, ಉಪಾಧ್ಯಕ್ಷ ಈರಪ್ಪ ಹೊಸಳ್ಳಿ, ಕಾರ್ಯದರ್ಶಿ ಪ್ರಕಾಶ ಖಾನಾಪುರ, ತುಳಸಪ್ಪ ನಾವಳ್ಳಿ, ಕೃಷ್ಣಪ್ಪ ಖಾನಾಪೂರ ಸೇರಿದಂತೆ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.



# ಬಿರುಗಾಳಿ ಸಹಿತ ಮಳೆಯ ಮುನ್ಸೂಚನೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಾದ್ಯಂತ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಸುರಿಯುತ್ತಿದೆ. ಮಲೆನಾಡು ಭಾಗದಲ್ಲಿ ನಿರಂತರವಾಗಿ ಮಳೆ ಮುಂದುವರಿದಿದೆ. 2025ರಲ್ಲಿ ಮುಂಗಾರು ಮಳೆ ಅತ್ಯಧಿಕ ಪ್ರಮಾಣದಲ್ಲಿ ಸುರಿಯಲಿದೆ. ಮೇ 10ರಿಂದ ರಾಜ್ಯಾದ್ಯಂತ ಬಿರುಗಾಳಿ ಸಹಿತ ಭಾರೀ ಮಳೆ ಆಗಲಿದೆ. ವಿವಿಧ ಭಾಗಗಳಲ್ಲಿ ಹೆಚ್ಚಿನ ಮಳೆ ಆಗುವ ಲಕ್ಷಣ ಇದೆ ಎಂದು ತಿಳಿಸಲಾಗಿದೆ.

ದಕ್ಷಿಣ ಒಳನಾಡಿನ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಹಾಸನ, ಕೊಡಗು, ಕೋಲಾರ, ತುಮಕೂರು, ಮೈಸೂರು, ಚಾಮರಾಜನಗರ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಪ್ರತಿ ಗಂಟೆಗೆ 50 ಕಿಲೋಮೀಟರ್‌ಗೂ ಹೆಚ್ಚಿನ ವೇಗದಲ್ಲಿ ಗಾಳಿ ಬೀಸಲಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಖೇಲೋ ಇಂಡಿಯಾ ಸ್ಕೇಟಿಂಗ್ ಕೇಂದ್ರ ಪ್ರಾರಂಭಗೊಳ್ಳಲಿದ್ದು, ಜಿಲ್ಲಾ ಖೇಲೋ ಇಂಡಿಯಾ ಸ್ಕೇಟಿಂಗ್ ಕೇಂದ್ರಕ್ಕೆ ತರಬೇತಿ ನೀಡಲು ಹಾಗೂ ಕ್ರೀಡಾಪಟುಗಳಿಗೆ ತರಬೇತಿ ನೀಡಲು ಸ್ಕೇಟಿಂಗ್ ತರಬೇತುದಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಖೇಲೋ ಇಂಡಿಯಾ ಸ್ಕೇಟಿಂಗ್ ಕೇಂದ್ರಕ್ಕೆ ಅರ್ಜಿ ಸಲ್ಲಿಸಿದವರನ್ನು ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಆಯ್ಕೆ ಸಮಿತಿಯು ತರಬೇತುದಾರರನ್ನು ಆಯ್ಕೆ ಮಾಡಲಿದ್ದು, ತರಬೇತುದಾರರು ಅಂತಾರಾಷ್ಟ್ರೀಯ, ರಾಷ್ಟ್ರೀಯ ಮಟ್ಟದ ಸ್ಕೇಟಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಿ ಪದಕ ವಿಜೇತರಾದವರಿಗೆ ಹಾಗೂ ಗದಗ ಜಿಲ್ಲೆಯವರಿಗೆ ಆದ್ಯತೆ ನೀಡಲಾಗುವುದು. ಖೇಲೋ ಇಂಡಿಯಾ ತರಬೇತುದಾರರ ಹುದ್ದೆಗೆ ಅರ್ಜಿ ಸಲ್ಲಿಸುವರು ಸ್ಕೇಟಿಂಗ್ ಕ್ರೀಡೆಯಲ್ಲಿ ಓಖಖ ಮಾಡಿದವರಿಗೆ ಹಾಗೂ ಗದಗ ರಹವಾಸಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು. ದಾಖಲೆಗಳನ್ನು ಪರಿಶೀಲಿಸಿ, ಜಿಲ್ಲಾ ಮಟ್ಟದ ಸಮಿತಿಯಿಂದ ನಡೆಸಲಾದ ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಒಂದು ವರ್ಷದ ಅವಧಿಗೆ ಗೌರವ ಸಂಭಾವನೆ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳಲಾಗುವುದು. ಅರ್ಹ ಅಭ್ಯರ್ಥಿಗಳು ಮೇ 13 ರೊಳಗೆ ಅರ್ಜಿಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ದೂರವಾಣಿ ಸಂಖ್ಯೆ 08372–238345 ಸಲ್ಲಿಸಬಹುದು.

# ಕಾರ್ಯಾಚರಣೆಯ ವಿಶ್ಲೇಷಣಾ ಸಭೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹುಬ್ಬಳ್ಳಿ ಕೇಂದ್ರ ಕಛೇರಿಯಲ್ಲಿ ವ್ಯವಸ್ಥಾಪಕರ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಕಾರ್ಯಾಚರಣೆಯ ವಿಶ್ಲೇಷಣಾ ಸಭೆ ಜರುಗಿತು.

ಸಭೆಯಲ್ಲಿ ಚಾಲನಾ ಸಿಬ್ಬಂದಿಗಳ ಬಳಕೆ ಉತ್ತಮಗೊಳಿಸುವುದು, ಅವಘಡ/ಅಪಘಾತ ರಹಿತ ಕಾರ್ಯಾಚರಣೆಗೆ ಒತ್ತು ನೀಡುವುದು, ಕೆ.ಎಂ.ಪಿ.ಎಲ್ ಸುಧಾರಿಸುವುದು ಇತ್ಯಾದಿ ವಿಷಯಗಳ ಕುರಿತು ಪ್ರಗತಿ ಪರಿಶೀಲಿಸಲಾಯಿತು.

ಈ ಸಭೆಯಲ್ಲಿ 01–04–2025ರಿಂದ 30–04–2025ರ ಮಾಹೆಯ ಅವಧಿಯಲ್ಲಿ ಶಕ್ತಿಯೇತರ ಸಾರಿಗೆ ಆದಾಯದ ಗುರಿ ಸಾಧನೆ ನೀಡಲಾಗಿತ್ತು. ಈ ಗುರಿ ಸಾಧನೆಯಲ್ಲಿ ಪ್ರಥಮ ಸ್ಥಾನ ಗದಗ ವಿಭಾಗ, ದ್ವಿತೀಯ ಸ್ಥಾನ ಹುಬ್ಬಳ್ಳಿ–ಧಾರವಾಡ ನಗರ ಸಾರಿಗೆ ವಿಭಾಗ ಮತ್ತು ತೃತೀಯ ಸ್ಥಾನವನ್ನು ಬೆಳಗಾವಿ ವಿಭಾಗದವರು ಗಳಿಸಿದ್ದು, ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಗುರಿ ಸಾಧನೆ ಮಾಡಿದ ವಿಭಾಗಗಳಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು. ಈ ಗುರಿ ಸಾಧನೆಗೆ ಕಾರಣಿಭೂತರಾದ ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು, ವಿಭಾಗೀಯ ಸಂಚಾರ ಅಧಿಕಾರಿಗಳು, ವಿಭಾಗೀಯ ತಾಂತ್ರಿಕ ಶಿಲ್ಪಿಗಳು, ಘಟಕ ವ್ಯವಸ್ಥಾಪಕರುಗಳಿಗೆ ಹಾಗೂ ವಿಭಾಗದ ಎಲ್ಲ ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ, ಗಣೇಶ ರಾಠೋಡ, ಇಮಾಮ್ ಕಾಸೀಮ್ ಕಂದಗಲ್ಲ, ಎಂ.ಬಿ. ಕಪಲಿ, ಸುಮನಾ ಯು, ರವಿ ಅಂಚಿಗಾವಿ ಮತ್ತು ಎಲ್ಲ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು, ವಿಭಾಗೀಯ ಸಂಚಾರ ಅಧಿಕಾರಿಗಳು, ವಿಭಾಗೀಯ ತಾಂತ್ರಿಕ ಶಿಲ್ಪಿಗಳು, ಘಟಕ ವ್ಯವಸ್ಥಾಪಕರುಗಳು ಹಾಗೂ ಇನ್ನಿತರ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.



# ಕನ್ನಡ ನಾಡು–ನುಡಿ, ಭಾಷೆಯನ್ನು ಉಳಿಸಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕನ್ನಡ ನಾಡು–ನುಡಿ, ಭಾಷೆಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯ ಎಂದು ಶೋಭಾ ಪಾಟೀಲ್ ಹೇಳಿದರು.



ಮುಳಗುಂದ ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಕನ್ನಡ ಸಾಹಿತ್ಯ ಹೋಬಳಿ ಘಟಕದ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆಯಲ್ಲಿ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಕನ್ನಡ ಭಾಷೆ, ಸಾಹಿತ್ಯ, ಕಲೆ, ಜನಪದ ಸಂಸ್ಕೃತಿಗಳ ಸಂವರ್ಧನೆ ಹಾಗೂ ಸಂರಕ್ಷಣೆಯ ಮಹದಾಶಯದೊಂದಿಗೆ ಮೈಸೂರು ಸಂಸ್ಥಾನದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರು ಮೇ 5, 1915ರಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿದರು. ನಾಲ್ವಡಿ ಕೃಷ್ಣರಾಜ ಒಡೆಯರ ಸಂಸ್ಥಾನದಲ್ಲಿ ದಿವಾನರಾಗಿದ್ದ ಸರ್ ಎಂ.ವಿಶ್ವೇಶ್ವರಯ್ಯ ಹಾಗೂ ಹಲವಾರು ಮಹನೀಯರು ಕನ್ನಡ ಸಾಹಿತ್ಯ ಪರಿಷತ್ತು ಬೆಳವಣಿಗೆಗೆ ಶ್ರಮಿಸಿದರು. ಇಂತಹ ಮಹನೀಯರು ಹಾಕಿಕೊಟ್ಟ ದಾರಿಯಲ್ಲಿ ಇಂದಿನ ಯುವಕರು ಸಾಗಬೇಕಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಸ್.ಸಿ. ಚವಡಿ, ಸಾಹಿತಿ ಮಂಜುನಾಥ ಮಟ್ಟಿ, ಮಹೇಶ ಶಿರಹಟ್ಟಿ, ಈರಣ್ಣಾ ದೊಟಿಕಲ್, ಕೆ.ಎಂ. ಹೆರಕಲ್, ಗಿರೀಶ ಪಿರಂಗಿ, ಪ್ರಭು ಕರಿಗಾರ, ರಾಜೇಶ್ವರಿ ಬಡ್ನಿ ಇದ್ದರು.

## ಉಗ್ರರಿಗೆ ಪಾಠ ಕಲಿಸಿದ ಯೋಧರಿಗೆ ನಮನ

■ ವಿಜಯಸಾಕ್ಷಿ ಸುದ್ದಿ, ಗದಗ

ಬುಧವಾರ ಬೆಳಗಿನ ಜಾವ ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದಲ್ಲಿದ್ದ ಭಯೋತ್ಪಾದಕರ 9 ನೆಲೆಗಳನ್ನು ಭಾರತದ ಸೇನೆ ಧ್ವಂಸಗೊಳಿಸಿವ ಮೂಲಕ ಪಾಕಿಸ್ತಾನದ ಉಗ್ರರಿಗೆ ನಮ್ಮ ಹೆಮ್ಮೆಯ ಭಾರತೀಯ ಯೋಧರು ತಕ್ಕ ಪಾಠ ಕಲಿಸಿದ್ದು, ಸಾರ್ವಜನಿಕರ ಪರವಾಗಿ ನಮ್ಮ ಯೋಧರಿಗೆ ನಮನಗಳನ್ನು ಸಲ್ಲಿಸುವದಾಗಿ ಬಿಜೆಪಿ ಯುವ ಮುಖಂಡ ವಸಂತ ಪಡಗದ ಹೇಳಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಳೆದ ತಿಂಗಳು ಕರ್ನಾಟಕ ಸೇರಿದಂತೆ ವಿವಿಧ ರಾಜ್ಯದಿಂದ ಕಾಶ್ಮೀರಕ್ಕೆ ತೆರಳಿದ್ದ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ಗುಂಡಿನ ದಾಳಿ ನಡೆಸಿ ಅಮಾಯಾಕ ನಾಗರಿಕರನ್ನು ಹತ್ಯೆಗೈದ ಉಗ್ರರಿಗೆ ಇಂದು ನಮ್ಮ ಯೋಧರು ನಡೆಸಿದ ಸಿಂಧೂರ್ ಕಾರ್ಯಾಚರಣೆಯಲ್ಲಿ ಉಗ್ರರ ಶಿಬಿರಗಳನ್ನು ಧ್ವಂಸ ಮಾಡಿದ್ದಾರೆ. ದೇಶಾದ್ಯಂತ ಉಗ್ರವಾದ ಕೊನೆಗೊಳ್ಳಬೇಕು. ಈ ನಿಟ್ಟಿನಲ್ಲಿ ಸರ್ಕಾರ ನಮ್ಮ ಭಾರತೀಯ ಯೋಧರಿಗೆ ಪಕ್ಷ ಭೇದ ಮರೆತು ಬೆಂಬಲ ನೀಡಬೇಕು ಎಂದು ಹೇಳಿದ್ದಾರೆ.

### ಪುರದ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್‌ನಲ್ಲಿ ದೀಪದಾನ ಸಮಾರಂಭ

## ನರ್ಸಿಂಗ್ ವೃತ್ತಿ ಪವಿತ್ರವಾದುದು

■ ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ಕ್ಷೇತ್ರದಲ್ಲಿ ರೋಗಿಗಳ ಆರೈಕೆಯ ಸೇವೆಯಲ್ಲಿ ನರ್ಸಿಂಗ್ ಸಿಬ್ಬಂದಿಗಳ ಕಾರ್ಯ ಅನುಪಮವಾದುದು. ನಿರಂತರ ಕೆಲಸದ ವೈದ್ಯಕೀಯ ಕ್ಷೇತ್ರದಲ್ಲಿ ನರ್ಸಿಂಗ್ ಸಿಬ್ಬಂದಿಗಳು ಬೆನ್ನೆಲುಬಾಗಿ ಕಾರ್ಯ ಮಾಡುತ್ತಾರೆ. ಅವರ ಸೇವೆ ಅಭಿನಂದನಾರ್ಹ ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ನುಡಿದರು.

ಗದುಗಿನ ಪುರದ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸಂಸ್ಥೆಯಲ್ಲಿ ಆಯೋಜಿಸಲಾಗಿದ್ದ ಪ್ರಥಮ ಜಿ.ಎನ್.ಎಂ ಬ್ಯಾಚ್‌ನ ವಿದ್ಯಾರ್ಥಿಗಳ ದೀಪದಾನ ಹಾಗೂ ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.




ವಿದ್ಯಾರ್ಥಿಗಳು ಶ್ರದ್ಧೆ, ನಿಷ್ಠೆಯಿಂದ ಅಧ್ಯಯನ ಮಾಡಬೇಕು. ಆಳವಾದ ಪ್ರಾತ್ಯಕ್ಷಿಕ ಜ್ಞಾನ ಪಡೆದು ರೋಗಿಗಳ ಸೇವೆ ಮಾಡಬೇಕು. ನರ್ಸಿಂಗ್ ವೃತ್ತಿ ಪವಿತ್ರವಾದುದು. ರೋಗಿಗಳಲ್ಲಿ ದೇವರನ್ನು ಕಾಣಬೇಕು. ವೃತ್ತಿಯ ಬಗ್ಗೆ ಗೌರವ, ಅಭಿಮಾನ ಇರಿಸಿಕೊಳ್ಳಬೇಕು ಎಂದರು.

ಇನ್ನೋರ್ವ ಅತಿಥಿ ಡಾ. ಜಿ.ಬಿ. ಪಾಟೀಲ ಮಾತನಾಡುತ್ತ, ನರ್ಸಿಂಗ್ ಶಿಕ್ಷಣವು ವೃತ್ತಿ ಕೌಶಲ್ಯದೊಂದಿಗೆ ಬೆಳೆಸಿಕೊಂಡ ಅನುಭವಿಕರಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬಹುದೊಡ್ಡ ಬೇಡಿಕೆ ಇದೆ ಎಂದರು. ಪ್ರಾಚಾರ್ಯರಾದ ಸಿಬಿಲ್ ನಿಲೂಗಲ್ ಅವರು ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧನೆ ಮಾಡಿದರು. ವೇದಿಕೆ ಮೇಲಿನ ಗಣ್ಯರು ಫ್ಲಾರೆನ್ಸ್ ನೈಟಿಂಗೇಲ್ ಅವರ ಭಾವಚಿತ್ರಕ್ಕೆ ಪುಷ್ಪ ಗೌರವ ಸಲ್ಲಿಸಿದರು. ವೇದಿಕೆಯ ಮೇಲೆ ಮುಖ್ಯ ಅತಿಥಿಗಳಾಗಿ ಎಸ್.ವಿ. ಚರಂತಿಮಠ, ಡಾ. ಸುರೇಶ ಅಂಗಡಿ, ಜಯಶ್ರೀ ಪುರದ, ಸವಿತಾ ಸವಡಿ ಉಪಸ್ಥಿತರಿದ್ದರು.

ಸಂಸ್ಥೆಯ ಚೇರಮನ್ ನಿರ್ಮಲಾ ಈಶ್ವರ ಸವಡಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಪೂರ್ವಿತಾ ಪುರದ ಹಾಗೂ ಡಾ. ಕಾವ್ಯ ಪುರದ ಪಾರಿತೋಷಕ ವಿತರಣಾ ಕಾರ್ಯಕ್ರಮ ನಡೆಸಿಕೊಟ್ಟರು. ಡಾ. ಉಮೇಶ ವೀ.ಪುರದ ಪ್ರಾಸ್ತಾವಿಕವಾಗಿ ಮಾತನಾಡಿ ಸರ್ವರನ್ನೂ ಸ್ವಾಗತಿಸಿದರು. ಚೈತ್ರಾ ಹಾಗೂ ಸಹನಾ ಕಾರ್ಯಕ್ರಮ ನಿರೂಪಣೆ ಮಾಡಿದರು. ಕರುಣಾ ವಂದನಾರ್ಪಣೆಗೈದರು. ಸಭಾ ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

> ದೇಶದಲ್ಲಿ ಪ್ರತಿ ಒಂದು ಸಾವಿರ ಜನರಿಗೆ ಮೂರು ಜನ ನರ್ಸಿಂಗ್ ಸಿಬ್ಬಂದಿಗಳ ಸೇವೆ ಅವಶ್ಯವಿದೆ. ಇದರ ಪೂರೈಕೆಗಾಗಿ ಇನ್ನೂ ಹೆಚ್ಚು ಕಾಲೇಜುಗಳು ಬರಬೇಕು. ಕೊರೋನಾ ಸಂದರ್ಭದಲ್ಲಿನ ನರ್ಸಿಂಗ್ ಸೇವೆಯನ್ನು ಎಂದೂ ಮರೆಯಲಾಗದು ಎಂದು ಎಸ್.ವಿ. ಸಂಕನೂರ ನುಡಿದರು.

## ಮೇ. 14ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಮೇ. 14ರಂದು ಬುಧವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ "ಪುರಸಭೆ ಕಚೇರಿ ಗಜೇಂದ್ರಗಡದಲ್ಲಿ" ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು.

ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಯಾವುದೇ ಸರಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ, ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶ ಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗಪಡಿಸಿದ ದೂರುಗಳ ಬಗ್ಗೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ, ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದೊಳಗೆ ಮಾಡಿಕೊಡದೆ, ಅಕ್ರಮ ಸಂಭಾವನೆ (ಲಂಚದ ಹಣ)ಯ ಸಲುವಾಗಿ ಅನಗತ್ಯ ವಿಳಂಬ ಮಾಡುತ್ತಿದ್ದರೆ ಲಿಖಿತ ದೂರವನ್ನು ದಾಖಲಿಸುವ ಬಗ್ಗೆ.

ಯಾವುದೇ ಸರಕಾರಿ ಅಧಿಕಾರಿಯು ತಾನು ಕರ್ತವ್ಯ ನಿರ್ವಹಿಸಲು ನಿಯೋಜಿಸಿದ ಕರ್ತವ್ಯವನ್ನು ನಿರ್ವಹಿಸುವಲ್ಲಿ ದುರಾಡಳಿತ ಪ್ರದರ್ಶಿಸುವಂತಹ ಅಧಿಕಾರಿಗಳ ಮೇಲೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ. ಪ್ರಪತ್ರ 1 ಮತ್ತು 2 ರಲ್ಲಿ ಅಫಿಡೆವಿಟ್‌ನೊಂದಿಗೆ ಅಗತ್ಯ ದಾಖಲಾತಿಗಳೊಂದಿಗೆ ಲಿಖಿತ ದೂರನ್ನು ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಶದ ಭದ್ರತೆ ಮುಖ್ಯ, ರಾಜಿ ಇಲ್ಲ: ಸಿಎಂ ಸಿದ್ದರಾಮಯ್ಯ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೇಶದ ಭದ್ರತೆ ಮುಖ್ಯ, ರಾಜಿ ಇಲ್ಲ. ನೂರಕ್ಕೆ ನೂರು ರಾಷ್ಟ್ರದ ಜೊತೆ ಇರುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಕಾವೇರಿ ನಿವಾಸದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಹಲ್ಗಾಮ್ ದಾಳಿ ಬಳಿಕವೂ ಪಾಕಿಸ್ತಾನದ ಉಗ್ರರನ್ನ ಸದೆಬಡೆಯಲಿಲ್ಲ. ತನ್ನ ಹಠಮಾರಿತನವನ್ನ ಮುಂದುವರಿಸಿದೆ. ಹಾಗಾಗಿ ನಮ್ಮ ಸೈನಿಕರು ದಾಳಿ ಮಾಡಿದ್ದಾರೆ. ಈ ದಾಳಿಯನ್ನ ಬೆಂಬಲಿಸುತ್ತೇನೆ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ ಪಾಠ. ಉಗ್ರ ನೆಲೆಯನ್ನ ಟಾರ್ಗೆಟ್ ಮಾಡಿ ದಾಳಿ ಆಗಿದೆ. ಅಮಾಯಕರ ಸಾವು-ನೋವು ಸಂಭವಿಸಿಲ್ಲ.

ಹಾಗಾಗಿ ನಮ್ಮ ಭಾರತೀಯ ಸೈನಿಕರಿಗೆ ದೊಡ್ಡ ಸಲಾಂ ಎಂದು ಕರ್ನಾಟಕ ಸರ್ಕಾರದ ಪರವಾಗಿ ಮೆಚ್ಚುಗೆ ವ್ಯಕ್ತಪಡಿಸಿದರು.

ನಾವು ಎಚ್ಚರ ವಹಿಸುವ ಕೆಲಸ ಮಾಡುತ್ತೇನೆ. ಕೇಂದ್ರ ಸರ್ಕಾರದ ಜೊತೆ ಮಾತನಾಡಿ ಸಂಪೂರ್ಣ ಬೆಂಬಲವನ್ನ ಕೊಡುತ್ತೇವೆ. ನಮ್ಮ ರಾಜ್ಯದಲ್ಲಿ ಎಲ್ಲಾ ಎಚ್ಚರಿಕೆ ಕ್ರಮ ತೆಗೆದುಕೊಳ್ಳುತ್ತದೆ. ಉಗ್ರರ ನೆಲೆ ಮೇಲಿನ ದಾಳಿಯಿಂದಾಗಿ ರಾಯಚೂರಿನ ರ್‍ಯಾಲಿಯನ್ನ ರದ್ದುಗೊಳಿಸಿದ್ದೇವೆ. ಕೇಂದ್ರ ಸರ್ಕಾರದ ಜೊತೆ ರಾಜ್ಯದ ಜನ ನಿಲ್ಲಬೇಕು ಎಂದು ಮನವಿ ಮಾಡುತ್ತೇನೆ ಎಂದರು. ನಮ್ಮ ರಾಜ್ಯವನ್ನ ಅಲರ್ಟ್ ಆಗಿ ಇಡಬೇಕು. ರಾಜ್ಯದಲ್ಲೂ ಮಾಕ್ ಡ್ರಿಲ್ ನಡೆಯುತ್ತಿದೆ.

## ಭಾರತೀಯರ ಶೌರ್ಯದ 'ಆಪರೇಶನ್ ಸಿಂಧೂರ'

■ ವಿಜಯಸಾಕ್ಷಿ ಸುದ್ದಿ, ಗದಗ

ಪಹಲ್ಗಾಮ್‌ನ ಭಯೋತ್ಪಾದಕ ಕೃತ್ಯಕ್ಕೆ ಪ್ರತೀಕಾರವಾಗಿ ಕೇಂದ್ರ ಸರ್ಕಾರ ಉಗ್ರ ನೆಲೆಗಳ ಮೇಲೆ ಕೈಗೊಂಡ ಕ್ಷಿಪಣಿ ದಾಳಿ ಭಾರತೀಯರ ಶೌರ್ಯವನ್ನು ಜಗತ್ತಿಗೆ ಸಾರಿ ಹೇಳಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಾರತವನ್ನು ಕೆಣಕಿದರೂ, ಭಯೋತ್ಪಾದಕರು ಭಾರತೀಯ ನಾಗರಿಕರ ರಕ್ತ ಹರಿಸಿದರೂ ನಾವು ಸುಮ್ಮನೆ ಕೂರುತ್ತಿದ್ದ ಕಾಲವೊಂದಿತ್ತು. ಆದರೆ ನರೇಂದ್ರ ಮೋದಿಯವರು ಪ್ರಧಾನಿಯಾದ ನಂತರ ಭಾರತೀಯ ಸೈನ್ಯಕ್ಕೆ ಹೊಸ ತೇಜಸ್ಸು ಬಂದಿದೆ. ಪುಲ್ವಾಮಾ ದಾಳಿಗೆ ಪ್ರತ್ಯುತ್ತರವಾಗಿ ನಡೆದ ಬಾಲಾಕೋಟ್ ದಾಳಿಯಲ್ಲಿ ನಮ್ಮ ಶಕ್ತಿ ಏನೆಂದು ವಿಶ್ವಕ್ಕೆ ತೋರಿಸಿದ್ದೆವು. ಈಗ ಮತ್ತೊಮ್ಮೆ ಉಗ್ರರು ನಮ್ಮನ್ನು ಕೆಣಕಿದಾಗ ಅವರ ಆಶ್ರಯತಾಣಗಳನ್ನು ನಾಶ ಮಾಡುವ 'ಆಪರೇಶನ್ ಸಿಂಧೂರ' ಭಾರತೀಯರ ಶಕ್ತಿ ಏನೆಂದು ಮತ್ತೊಮ್ಮೆ ಸಾಬೀತು ಮಾಡಿದೆ.

ಇಂಥಹ ದಿಟ್ಟ ಕ್ರಮ ಕೈಗೊಂಡ ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಷಾ ಹಾಗೂ ಸೇನಾ ಮುಖಂಡರು ಅಭಿನಂದನಾರ್ಹರು. ಬಿಜೆಪಿ ಕೇಂದ್ರ ಸರ್ಕಾರ ಏನು ಮಾಡುತ್ತಿದೆ ಎಂದು ಕೇಳುತ್ತಿದ್ದ ಪ್ರತಿಪಕ್ಷಗಳಿಗೆ ಇಂದು ಉತ್ತರ ಸಿಕ್ಕಿದ್ದು, ಭಾರತವನ್ನು ಕೆಣಕಿದರೆ ಪ್ರಧಾನಿ ಮೋದಿ ಪ್ರತೀಕಾರ ತೀರಿಸಿಕೊಳ್ಳದೆ ಬಿಡುವುದಿಲ್ಲ ಎಂದು ಮತ್ತೆ ರುಜುವಾತಾಗಿದೆ. ಭಯೋತ್ಪಾದಕ ಶಕ್ತಿಗಳನ್ನು ಬುಡಸಮೇತ ನಿರ್ನಾಮ ಮಾಡುವ ಅವಶ್ಯಕತೆಯಿದ್ದು, ಇಂಥ ದುಷ್ಟ ಕೃತ್ಯಗಳಿಗೆ ಕುಮ್ಮಕ್ಕು ನೀಡುವ ಪಾಕಿಸ್ತಾನದ ಎದೆಯಲ್ಲೂ ಆಪರೇಶನ್ ಸಿಂಧೂರ ಭಯ ಹುಟ್ಟುಹಾಕಿದೆ ಎಂದಿದ್ದಾರೆ.

## ಪ್ರತೀಕಾರದ ದಾಳಿ ಸ್ವಾಗತಾರ್ಹ

■ ವಿಜಯಸಾಕ್ಷಿ ಸುದ್ದಿ, ಗದಗ

ಪಹಲ್ಗಾಮ್ ಭಯೋತ್ಪಾದಕರ ದಾಳಿಗೆ ಪ್ರತಿಯಾಗಿ ಭಾರತ ಸರ್ಕಾರ ಮತ್ತು ಸೇನೆ ಉಗ್ರರ ಅಡಗುದಾಣಗಳ ಮೇಲೆ ನಡೆಸಿದ ಪ್ರತೀಕಾರದ ದಾಳಿ ಸ್ವಾಗತಾರ್ಹ ಎಂದು ಕೆಪಿಸಿಸಿ ಸದಸ್ಯ ಆನಂದ ಸ್ವಾಮಿ ಗಡ್ಡದೇವರಮಠ ಹೇಳಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಏನೂ ಅರಿಯದ ಮುಗ್ಧ 26 ಜನ ಭಾರತೀಯರ ಹತ್ಯೆ ಮಾಡಿದ್ದಲ್ಲದೇ ಪದೇ ಪದೇ ಭಾರತದ ಮೇಲೆ ದಾಳಿ, ಕುತಂತ್ರ ಮಾಡಿ ಭಾರತೀಯರ ಸಹನೆ, ಸ್ವಾಭಿಮಾನ ಕೆಣಕುತ್ತಿರುವ ಪಾಕಿಸ್ತಾನದ ಉಗ್ರರ ಅಟ್ಟಹಾಸ ಮಟ್ಟ ಹಾಕುವ ದಿಟ್ಟ ನಿರ್ಧಾರ ಖುಷಿ ತಂದಿದೆ. ಭಾರತದ ಸೇನೆಯ ಮೇಲೆ ಅಪಾರ ಗೌರವ, ವಿಶ್ವಾಸವಿದ್ದು, ಭಾರತ ಮಾತೆಯ ಮಕ್ಕಳಾದ ನಾವೆಲ್ಲ ನಮ್ಮೊಳಗಿನ ಬೇಧಭಾವ ಬದಿಗೊತ್ತಿ ದೇಶದ ರಕ್ಷಣೆಗೆ ಕಂಕಣಬದ್ಧರಾಗೋಣ ಎಂದಿದ್ದಾರೆ.

## ಸಾಧಕ ವಿದ್ಯಾರ್ಥಿನಿ ಮುಮ್ತಾಜ್‌ಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 623 ಅಂಕಗಳನ್ನು ಪಡೆದು ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಹಾಗೂ ರಾಜ್ಯಕ್ಕೆ ತೃತೀಯ ಸ್ಥಾನವನ್ನು ಪಡೆದ ವಿದ್ಯಾರ್ಥಿನಿ ಮುಮ್ತಾಜ್ ಬಾಬರಸಾಬ್ ಅತ್ತಾರ ಅವರಿಗೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಯುವ ಘಟಕದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಮುಖ್ಯ ಅತಿಥಿಯಾಗಿ ಆಗಮಿಸಿದ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದ್ ಶಫಿ ನಾಗರಕಟ್ಟಿ ಮಾತನಾಡುತ್ತಾ, ಸಮುದಾಯದ ಹೆಣ್ಣುಮಕ್ಕಳು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಶಿಕ್ಷಣವನ್ನು ಪಡೆಯಬೇಕು ಹಾಗೂ ಒಳ್ಳೆಯ ಹುದ್ದೆಗಳಲ್ಲಿ ಇರಬೇಕು ಎಂದರಲ್ಲದೆ, ಪ್ರತಿಭಾನ್ವಿತ ವಿದ್ಯಾರ್ಥಿನಿಯ ಭವಿಷ್ಯ ಉಜ್ವಲವಾಗಲೆಂದು ಶುಭ ಹಾರೈಸಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಮುಮ್ತಾಜ್ ಬಾಬರಸಾಬ್ ಅತ್ತಾರ, ಎಂ.ಬಿ.ಬಿ.ಎಸ್ ಓದುವ ಬಯಕೆಯನ್ನು ವ್ಯಕ್ತಪಡಿಸಿದರು.

ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಯಾಸೀನ್ ಅ. ಮುಲ್ಲಾ ಸ್ವಾಗತಿಸಿದರು. ಸಂಘಟನೆಯ ಸದಸ್ಯರಾದ ಅಬ್ದುಲ್ ಮುನಾಫ್ ಸಯ್ಯದ್ ವಂದಿಸಿದರು. ಈ ಸಂದರ್ಭದಲ್ಲಿ ವಿಧ್ಯಾರ್ಥಿನಿಯ ಪಾಲಕರಾದ ಬಾಬರಸಾಬ್ ಅತ್ತಾರ ದಂಪತಿಗಳು, ನಾಸೀರ್ ನರೇಗಲ್, ಗದಗ ಜಿಲ್ಲಾ ಯುವ ಘಟಕದ ಉಪಾಧ್ಯಕ್ಷ ಅಫ್ಜಲ್ ಮನಿಯಾರ, ಗದಗ ಜಿಲ್ಲಾ ಯುವ ಘಟಕದ ತಾಲೂಕು ಅಧ್ಯಕ್ಷ ಇನ್ನೂಸ ಮಲ್ಲಾದರವೇಶ, ಯೂಸುಫ್ ಇಲ್ಲಾಳ, ಸೊಹೆಲ್ ಹಣಗಿ, ಯೂನಸ್ ಇಟಗಿ, ಯೂಸುಫ್ ನಾಲಬಂದ ಇನ್ನಿತರರು ಉಪಸ್ಥಿತರಿದ್ದರು.

## ವೀರೇಶ್ವರ ಪುಣ್ಯಾಶ್ರಮದಲ್ಲಿ ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಮ್ಮು-ಕಾಶ್ಮೀರದಲ್ಲಿ ಅಮಾಯಕ ಪ್ರವಾಸಿಗರ ಮೇಲೆ ಗುಂಡಿನ ದಾಳಿ ಮಾಡಿ 30 ಜನರ ಕಗ್ಗೊಲೆ ಮಾಡಿದ ಪಾಕಿಸ್ತಾನ ಬೆಂಬಲಿತ ಉಗ್ರರ ವಿರುದ್ಧ ಭಾರತೀಯ ಸೇನೆ ಸಮರ ಸಾರಿದ್ದು, ಈ ಯುದ್ಧದಲ್ಲಿ ಭಾರತೀಯ ಸೇನೆ ಜಯಶಾಲಿಯಾಗಲೆಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ನಗರದ ವೀರೇಶ್ವರ ಪುಣ್ಯಾಶ್ರಮದ ಪಂಡಿತ ಪುಟ್ಟರಾಜ ಕವಿಗಳ ಆಶ್ರಮದಲ್ಲಿ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ಈ ಕಾರ್ಯಕ್ರಮದಲ್ಲಿ ಸರ್ವ ಸದಸ್ಯರು ಪಾಲ್ಗೊಳ್ಳಬೇಕೆಂದು ಗದುಗಿನ ಸರಾಫ ಅಸೋಸಿಯೇಶನ್ ಅಧ್ಯಕ್ಷ ಸಿದ್ದಲಿಂಗೇಶ ದೇವೆಂದ್ರಪ್ಪ ಮೂರಶಿಳ್ಳಿನ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## ಆಪರೇಷನ್ ಸಿಂಧೂರದ ಬಗ್ಗೆ ಅಮಿತ್ ಶಾ ಶ್ಲಾಘನೆ!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪರೇಷನ್ ಸಿಂಧೂರದ ಮೂಲಕ ನರಮೇಧಕ್ಕೆ ತಕ್ಕ ಉತ್ತರ ಕೊಡಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾರತೀಯ ಸಶಸ್ತ್ರ ಪಡೆಗಳ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅಮಿತ್ ಶಾ, ನಮ್ಮ ಸಶಸ್ತ್ರ ಪಡೆಗಳ ಬಗ್ಗೆ ಹೆಮ್ಮೆಯಿದೆ.

## ಗೀತಾ ಬಾಬುಸಿಂಗ್‌ರಿಗೆ ಪಿಎಚ್‌ಡಿ

■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ಗುಲಬರ್ಗಾ ವಿಶ್ವ ವಿದ್ಯಾನಿಲಯವು ಗೀತಾ ಬಾಬುಸಿಂಗ್ ಅವರು 'ಎ ಸ್ಟಡಿ ಆನ್ ರಿಸ್ಟೋರೇಷನ್ ಆಫ್ ಫಾಗಿ ಆಂಡ್ ಮೊಷನ್ ಬ್ಲರ್ಡ್ ಇಮೇಜಿಸ್ ಆಫ್ ರೋಡ್ ಸೀನ್ಸ್' ಕುರಿತು ಸಲ್ಲಿಸಿದ್ದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ದೊರಕಿದೆ.



ಗೀತಾ ಬಾಬುಸಿಂಗ್ ಗುಲಬರ್ಗಾ ವಿವಿಯ ವಿಜ್ಞಾನ ನಿಕಾಯದ ಅನ್ವಯಿಕ ಎಲೆಕ್ಟ್ರಾನಿಕ್ಸ್ ವಿಭಾಗದ ಡಾ. ಆರ್.ಎಲ್. ರಾಯಭಾಗಕರ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ಡಾ. ಗೀತಾ ಬಾಬುಸಿಂಗ್ ಅವರನ್ನು ಹಂಗಾಮಿ ಕುಲಪತಿ ಗೂರು ಶ್ರೀರಾಮುಲು, ಕುಲಸಚಿವ ರಮೇಶ ಲಂಡನಕರ್, ಮೌಲ್ಯಮಾಪನ ಕುಲಸಚಿವ ಪ್ರೊ. ನಿಂಗಪ್ಪ ಕಣ್ಣೂರು ಅವರು ಅಭಿನಂದಿಸಿದ್ದಾರೆ. ಡಾ. ಗೀತಾ ಬಾಬುಸಿಂಗ್ ಅವರು ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕಂಪ್ಯೂಟರ್ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ. ಜಿ.ಜಿ. ರಜಪೂತ ಅವರ ಪತ್ನಿ.

## ಉಗ್ರರು ಮತ್ತೆ ಉಸಿರೆತ್ತಬಾರದು

■ ವಿಜಯಸಾಕ್ಷಿ ಸುದ್ದಿ, ಕೋಲಾರ

ಪಾಕಿಸ್ತಾನ ಮುಂದಿನ ದಿನಗಳಲ್ಲಿ ಭಾರತದ ಕಡೆ ತಿರುಗಿ ನೋಡಬಾರದು. ಅಲ್ಲಿನ ಉಗ್ರರು ಮತ್ತೆ ಉಸಿರೆತ್ತಬಾರದು, ಆ ನಿಟ್ಟಿನಲ್ಲಿ ನಮ್ಮ ಬೆಂಬಲ ಕೊಡಬೇಕಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕರೆ ನೀಡಿದರು.



ಕಾಂಗ್ರೆಸ್ ಸರ್ಕಾರದ ವಿರುದ್ಧ ನಡೆಸುತ್ತಿರುವ 'ಜನಾಕ್ರೋಶ ಯಾತ್ರೆ'ಯ ಬೃಹತ್ ಪ್ರತಿಭಟನಾ ಸಭೆಯಲ್ಲಿ ಅವರು ಮಾತನಾಡಿ, ಪೆಹಲ್ಗಾಂ ದುರ್ಘಟನೆ ಮೂಲಕ 26 ಜನರ ಸಾವಿಗೆ ಕಾರಣರಾದ ಉಗ್ರರ ವಿರುದ್ಧ ದಿಟ್ಟ ಕ್ರಮ ಕೈಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಮುಂದಾಗಿದ್ದಾರೆ.

ಮೋದಿ ಮತ್ತು ಭಾರತೀಯ ಯೋಧರ ಜೊತೆ ನಿಲ್ಲುವ ಸಂಕಲ್ಪವನ್ನು ಭಾರತದ ಜನರು ಮತ್ತು ಬಿಜೆಪಿ ಮಾಡಿದೆ ಎಂದು ಅವರು ತಿಳಿಸಿದರು.

## ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ವಿದ್ಯುನ್ಮಾನ ವಿಭಾಗದಲ್ಲಿ ಪಿ.ಸಿ.ಬಿ ವಿನ್ಯಾಸ ಮತ್ತು ಪ್ರೋಟೋಟೈಪಿಂಗ್ ಕುರಿತು ಎರಡು ದಿನಗಳ ಕಾರ್ಯಾಗಾರ ಜರುಗಿತು.



ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಬೆಂಗಳೂರಿನ ಆರ್‌ಲಾಜಿಕ್ಸ್ ನಿರ್ದೇಶಕ ರಾಕೇಶ ಪಾಲ್ಗೊಂಡು ಮಾತನಾಡಿ, ಪಿ.ಸಿ.ಬಿ ಇದು ಇಲೆಕ್ಟ್ರಾನಿಕ್ಸ್ ಸ್ಕಿಮ್ಯಾಟಿಕ್‌ನಿಂದ ಭೌತಿಕ ಮುದ್ರಿತ ಸರ್ಕ್ಯೂಟ್ ಬೋರ್ಡ್ ಪ್ರಕ್ರಿಯೆಯಾಗಿದ್ದು, ಅದು ಇಲೆಕ್ಟ್ರಾನಿಕ್ ಉಪಕರಣದ ಸಮರ್ಪಕ ಕಾರ್ಯ ನಿರ್ವಹಣೆ ಮಾಡುತ್ತದೆ. ಇಂದಿನ ವಿದ್ಯಾರ್ಥಿಗಳಿಗೆ ಇದರ ಜ್ಞಾನ ಅತ್ಯವಶ್ಯಕ ಎಂದು ತಿಳಿಸಿದರು. ಕಾರ್ಯಕ್ರಮವನ್ನು ಇಲೆಕ್ಟ್ರಿಕಲ್ ಮತ್ತು ಇಲೆಕ್ಟ್ರಾನಿಕ್ಸ್ ವಿಭಾಗದ ಮುಖ್ಯಸ್ಥರಾದ ಡಾ. ಈರಣ್ಣ ಕೊರಚಗಾಂವ್ ಹಾಗೂ ವಿದ್ಯುನ್ಮಾನ ಮತ್ತು ಸಂವಹನ (ಇ&ಸಿ) ಮುಖ್ಯಸ್ಥರಾದ ಪ್ರೊ. ಜಗದೀಶ ಶಿವನಗುತ್ತಿ ಉದ್ಘಾಟಿಸಿರು.

ಡಾ. ಈರಣ್ಣ ಕೊರಚಗಾಂವ್ ಮಾತನಾಡಿ, ಪಿ.ಸಿ.ಬಿ ಇದು ಇಲೆಕ್ಟ್ರಾನಿಕ್ಸ್ ಮಹತ್ವಾಕಾಂಕ್ಷಿ ಭಾಗವಾಗಿದ್ದು, ಹಾರ್ಡ್‌ವೇರ್ ಅಳವಡಿಸಲು ಬೇಕಾದ ಮಹತ್ವಪೂರ್ಣ ವ್ಯವಸ್ಥೆಯಾಗಿದೆ. ಅದರೊಂದಿಗೆ ಸಾಫ್ಟ್‌ವೇರ್‌ನ್ನು ಸಂಯೋಜಿಸುವ ತಾಂತ್ರಿಕತೆಯನ್ನು ಇಂದಿನ ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಪಿ.ಸಿ.ಬಿ ಪ್ರಾಯೋಗಿಕತೆಯನ್ನು ಸವಿವರವಾಗಿ ತಿಳಿಸಿದ ಪ್ರೊ. ಜಗದೀಶ ಶಿವನಗುತ್ತಿ, ಇಂದಿನ ಆಧುನಿಕ ಯುಗದಲ್ಲಿ ಬಹುತೇಕ ಎಲ್ಲ ಇಲೆಕ್ಟ್ರಾನಿಕ್ ಪರಿಕರಗಳು ಪಿ.ಸಿ.ಬಿಯನ್ನು ಅವಲಂಬಿಸಿವೆ ಎಂದರು.

ಕಾರ್ಯಕ್ರಮದಲ್ಲಿ ವಿದ್ಯುನ್ಮಾನ ಮತ್ತು ಸಂವಹನ (ಇ&ಸಿ) ವಿಭಾಗದ ಸಿಬ್ಬಂದಿಗಳಾದ ಡಾ. ಶೈಲಜಾ ಮುದೇನಗುಡಿ, ಡಾ. ಪ್ರಕಾಶ ಮರಕುಂಬಿ, ಪ್ರೊ. ಆದೇಶ ಅಂಗಡಿ, ಪ್ರೊ. ರವಿ ಗಡಾದ, ಪ್ರೊ. ಮುಕ್ತಾ ಪಾಟೀಲ, ಪ್ರೊ. ಲೋಹಿತ ಜವಳಿ ಉಪಸ್ಥತರಿದ್ದರು. ಕಾರ್ಯಕ್ರಮವನ್ನು ಪ್ರೊ. ನೀತಾ ಮುದರಡ್ಡಿ ಸಂಯೋಜಿಸಿದ್ದರು. ವಿದ್ಯಾರ್ಥಿಗಳಾದ ಆದಿತಿ ಕಾರ್ಯಕ್ರಮವನ್ನು ನಿರೂಪಿಸಿದರು. ಅಂಜನಾ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka